ಸಂಪುಟ : 11 ಸಂಚಿಕೆ: 62 ಪುಟ : 4+2 ಬೆಲೆ: 3.00 ಮಂಗಳವಾರ ಎಪ್ರಿಲ್ 07 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 62 Pages : 4+2 Price : 3.00 Tuesday April 07 2026 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷರ ಗದಗ ಪ್ರವಾಸ

**■ ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷ ಯು. ನಿಸಾರ ಅಹಮದ್ ಅವರು ಎಪ್ರಿಲ್ 8ರಂದು ಗದಗ ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ ಎಂದು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಪ್ರಕಟಣೆ ತಿಳಿಸಿದೆ.

ಅಂದು ಬೆಳಿಗ್ಗೆ 9.30 ಗಂಟೆಗೆ ಹಿಂದುಳಿದ ಪ್ರದೇಶಗಳ ಅಂಗನವಾಡಿ ಕೇಂದ್ರಗಳು ಹಾಗೂ ಉರ್ದು ಶಾಲೆಗಳಿಗೆ ಭೇಟಿ ನೀಡಲಿದ್ದಾರೆ.

ಬೆಳಿಗ್ಗೆ 10.30ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಗದಗದ ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆಯಲ್ಲಿ ಅಲ್ಪಸಂಖ್ಯಾತರ ಕುಂದುಕೊರತೆ ವಿಚಾರಣೆ ನಡೆಸುವುದರ ಜೊತೆಗೆ ಅಲ್ಪಸಂಖ್ಯಾತ ಮಹಿಳೆಯರು ಹಾಗೂ ಸ್ಥಳೀಯ ಸಂಘಟನೆಗಳಿಗೆ ಸಾಕ್ಷರತೆ ಕುರಿತು ಜಾಗೃತಿ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಮಧ್ಯಾಹ್ನ 3.30ಕ್ಕೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪ್ರಧಾನ ಮಂತ್ರಿ 15 ಅಂಶಗಳ ಕಾರ್ಯಕ್ರಮದ ಪ್ರಗತಿ ಕುರಿತು ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಪರಿಶೀಲನಾ ಸಭೆ ನಡೆಸಲಿದ್ದಾರೆ.

## ಎ. 12ರಂದು ವಸತಿ ಶಾಲೆಗಳ ಪ್ರವೇಶ ಪರೀಕ್ಷೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆ ಹಾಗೂ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ 2026–27ನೇ ಸಾಲಿನ 6ನೇ ತರಗತಿ ಪ್ರವೇಶಕ್ಕಾಗಿ ಎಪ್ರಿಲ್ 12ರಂದು ಪ್ರವೇಶ ಪರೀಕ್ಷೆ ನಡೆಯಲಿದೆ.

ಗದಗ, ರೋಣ ಮತ್ತು ಮುಂಡರಗಿ ತಾಲೂಕುಗಳ ವಿದ್ಯಾರ್ಥಿಗಳು ಈ ಪರೀಕ್ಷೆಯಲ್ಲಿ ಭಾಗವಹಿಸಲಿದ್ದಾರೆ. ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳ ಪೋಷಕರ ಮೊಬೈಲ್‌ಗೆ ಪರೀಕ್ಷಾ ಕೇಂದ್ರದ ಮಾಹಿತಿಯನ್ನು ನಿರ್ದೇಶನಾಲಯ, ಬೆಂಗಳೂರು ವತಿಯಿಂದ ಕಳುಹಿಸಲಾಗಿದೆ.

ಪರೀಕ್ಷಾರ್ಥಿಗಳು ತಮ್ಮ ಪ್ರವೇಶ ಪತ್ರಗಳನ್ನು ಆನ್‌ಲೈನ್ ಮೂಲಕ ಡೌನ್‌ಲೋಡ್ ಮಾಡಿಕೊಂಡು, ಅದರಲ್ಲಿ ಸೂಚಿಸಿರುವ ಪರೀಕ್ಷಾ ಕೇಂದ್ರಕ್ಕೆ ಹಾಜರಾಗಬೇಕು ಎಂದು ಪ್ರಕಟಣೆ ತಿಳಿಸಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಧಿಕಾರಿಗಳನ್ನು ಸಂಪರ್ಕಿಸಬಹುದು. ಹಾಲ್‌ಟಿಕೆಟ್ ಡೌನ್‌ಲೋಡ್ ಲಿಂಕ್: https://erp.dom.karnataka.gov.in/adm/Admission/StudentHallticket

## ದೂದಪೀರಾಂ ಉರುಸು: ಶಾಂತಿ, ಸಹೋದರತೆಯ ಸಂದೇಶ



**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಇತಿಹಾಸ ಪ್ರಸಿದ್ಧ ದೂದಪೀರಾಂ ದರ್ಗಾದಲ್ಲಿ ನಡೆಯುತ್ತಿರುವ ಉರುಸು ಕಾರ್ಯಕ್ರಮಗಳು ಅದ್ದೂರಿಯಾಗಿ ಜರುಗುತ್ತಿದ್ದು, ವಿವಿಧ ಭಾಗಗಳಿಂದ ಸಾವಿರಾರು ಭಕ್ತರು ಆಗಮಿಸಿ ದೂದನಾನಾ ಮಹಾತ್ಮರ ಗದ್ದುಗೆ ದರ್ಶನ ಪಡೆಯುತ್ತಿದ್ದಾರೆ.

ಸಂತ ದೂದಪೀರಾಂ ಮಹಾತ್ಮರ 137ನೇ ಉರುಸು ಅಂಗವಾಗಿ ಶನಿವಾರ ವಾಜ್–ಬಯಾನ್ ಧರ್ಮಸಭೆ ನಡೆಯಿತು. ಈ ವೇಳೆ ಧರ್ಮಗುರು ▶▶ 3ನೇ ಪುಟಕ್ಕೆ

**ಮುಂಗಾರು ಪೂರ್ವದಲ್ಲಿ ಸಿಡಿಲು ಹೆಚ್ಚಳ ಸಾಧ್ಯತೆ– ಸಾರ್ವಜನಿಕರಿಗೆ ಸುರಕ್ಷತಾ ಮಾರ್ಗಸೂಚಿ**

# ಗುಡುಗು–ಸಿಡಿಲು ಅಪಾಯ: ಮುನ್ನೆಚ್ಚರಿಕೆ ಕ್ರಮ ಪಾಲಿಸಿ



**■ ವಿಜಯಸಾಕ್ಷಿ ಸುದ್ದಿ, ಗದಗ**

ಗುಡುಗು ಮತ್ತು ಸಿಡಿಲು ಬಡಿತದಿಂದ ಉಂಟಾಗುವ ಅಪಾಯಗಳನ್ನು ತಗ್ಗಿಸಲು ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರ ಮಾರ್ಗಸೂಚಿಗಳನ್ನು ನೀಡಿದ್ದು, ಸಾರ್ವಜನಿಕರು ಅವನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದ್ದಾರೆ.

ಕರ್ನಾಟಕದ ಹಲವು ಭಾಗಗಳಲ್ಲಿ ಮುಂಗಾರು ಪೂರ್ವ ಹಾಗೂ ಮುಂಗಾರಿನಲ್ಲಿ ಗುಡುಗು–ಸಿಡಿಲು ಹೆಚ್ಚಾಗಿ ಸಂಭವಿಸುವ ಸಾಧ್ಯತೆ ಇದ್ದು, ವಿಶೇಷವಾಗಿ ಮಧ್ಯಾಹ್ನ ಹಾಗೂ ಸಂಜೆ ವೇಳೆಯಲ್ಲಿ ಅಪಾಯ ಹೆಚ್ಚಿರುತ್ತದೆ ಎಂದು ತಿಳಿಸಿದ್ದಾರೆ.

ಅನಾಹುತಗಳನ್ನು ತಪ್ಪಿಸಲು ಹವಾಮಾನ ಮುನ್ಸೂಚನೆಗಳನ್ನು ಗಮನಿಸಿ, ಪ್ರತಿಕೂಲ ಹವಾಮಾನದಲ್ಲಿ ಹೊರಗೆ ಹೋಗುವುದನ್ನು ತಪ್ಪಿಸಬೇಕು. ಕೃಷಿ, ಮೀನುಗಾರಿಕೆ, ಜಾನುವಾರು ಮೇಯಿಸುವಂತಹ ಹೊರಾಂಗಣ ಚಟುವಟಿಕೆಗಳನ್ನು ತಾತ್ಕಾಲಿಕವಾಗಿ ನಿಲ್ಲಿಸುವುದು ಅಗತ್ಯವಾಗಿದೆ. ಸಿಡಿಲಿನ ಸಮಯದಲ್ಲಿ ಸುರಕ್ಷಿತ ಕಟ್ಟಡಗಳಲ್ಲಿ ಆಶ್ರಯ ಪಡೆಯಬೇಕು. ಮರಗಳ ಕೆಳಗೆ, ವಿದ್ಯುತ್ ಕಂಬಗಳ ಬಳಿ, ನೀರಿನ ಮೂಲಗಳ ಬಳಿ ಅಥವಾ ಎತ್ತರ ಪ್ರದೇಶಗಳಲ್ಲಿ ನಿಲ್ಲುವುದು ಅಪಾಯಕಾರಿ ಎಂದು ತಿಳಿಸಿದ್ದಾರೆ. ಸಿಡಿಲು ಸಮಯದಲ್ಲಿ ಮೊಬೈಲ್, ವಿದ್ಯುತ್ ಸಾಧನಗಳ ಬಳಕೆ ತಪ್ಪಿಸಿ, ಕಿಟಕಿ–ಬಾಗಿಲುಗಳನ್ನು ಮುಚ್ಚಿ ಒಳಗೇ ಇರಬೇಕು.

ವಾಹನದಲ್ಲಿದ್ದರೆ ವಾಹನದಲ್ಲಿಯೇ ಉಳಿಯುವುದು ಸುರಕ್ಷಿತ ಎಂದು ಸೂಚಿಸಲಾಗಿದೆ.

### ಎಮರ್ಜೆನ್ಸಿ ಸಲಹೆ

* ಸುರಕ್ಷಿತ ಸ್ಥಳ ಸಿಗದಿದ್ದರೆ ಎರಡು ಕಾಲುಗಳನ್ನು ಜೋಡಿಸಿ ಕುಳಿತುಕೊಳ್ಳಿ
* ತಲೆಯನ್ನು ಬಗ್ಗಿಸಿ ಕಿವಿಗಳನ್ನು ಮುಚ್ಚಿಕೊಳ್ಳಿ
* ಲೋಹದ ವಸ್ತುಗಳಿಂದ ದೂರವಿರಿ
* ಅನಾರೋಗ್ಯ ಅಥವಾ ಗಾಯವಾದರೆ ತಕ್ಷಣ ವೈದ್ಯರನ್ನು ಸಂಪರ್ಕಿಸಿ

"ಗುಡುಗು–ಸಿಡಿಲು ವೇಳೆ ಹೊರಾಂಗಣ ಚಟುವಟಿಕೆ ತಪ್ಪಿಸಿ, ಸುರಕ್ಷಿತ ಸ್ಥಳದಲ್ಲಿ ಆಶ್ರಯ ಪಡೆಯುವುದು ಜೀವ ರಕ್ಷಣೆಗಾಗಿ ಅತ್ಯಗತ್ಯ."

– **ಸಿ.ಎನ್. ಶ್ರೀಧರ್**, ಜಿಲ್ಲಾಧಿಕಾರಿ.

* ಸಿಡಿಲು ಅಪಾಯದಿಂದ ರಕ್ಷಣೆಗಾಗಿ ಮುಖ್ಯ ಸೂಚನೆಗಳು:
* ಹವಾಮಾನ ಮುನ್ಸೂಚನೆ ಗಮನಿಸಿ
* ಮಳೆ, ಗುಡುಗು ಸಮಯದಲ್ಲಿ ಹೊರಗೆ ಹೋಗುವುದನ್ನು ತಪ್ಪಿಸಿ
* ಮರಗಳ ಕೆಳಗೆ, ವಿದ್ಯುತ್ ಕಂಬಗಳ ಬಳಿ ನಿಲ್ಲಬೇಡಿ
* ನೀರಿನ ಮೂಲಗಳಿಂದ ದೂರವಿರಿ
* ಮೊಬೈಲ್, ವಿದ್ಯುತ್ ಸಾಧನ ಬಳಕೆ ತಪ್ಪಿಸಿ
* ಸುರಕ್ಷಿತ ಕಟ್ಟಡಗಳಲ್ಲಿ ಆಶ್ರಯ ಪಡೆಯಿರಿ
* ವಾಹನದಲ್ಲಿದ್ದರೆ ಒಳಗೇ ಉಳಿಯಿರಿ

**ಹಿಂದಿ ಹೇರಿಕೆ ವಿರುದ್ಧ ಕಿಡಿ – ರಾಜ್ಯಪಾಲರನ್ನು ಹಿಂಪಡೆಯಲು ಕರವೇ ಆಗ್ರಹ**

# ಭಾಷಾ ನೀತಿಯಲ್ಲಿ ರಾಜ್ಯಪಾಲರ ಹಸ್ತಕ್ಷೇಪ ಆರೋಪ

**■ ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ರಕ್ಷಣಾ ವೇದಿಕೆ (ಕರವೇ) ಗದಗ ಜಿಲ್ಲಾ ಘಟಕವು ರಾಜ್ಯಪಾಲ ತಾವರಚಂದ್ ಗೆಹ್ಲೋಟ್ ಅವರನ್ನು ತಕ್ಷಣ ಹಿಂಪಡೆಯುವಂತೆ ಕೇಂದ್ರ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದೆ.

ಕರವೇ ಜಿಲ್ಲಾ ಅಧ್ಯಕ್ಷ ಹನಮಂತಪ್ಪ ಅಬ್ಬಿಗೇರಿ ನೇತೃತ್ವದಲ್ಲಿ ಸಲ್ಲಿಸಿದ ಮನವಿಯಲ್ಲಿ, ರಾಜ್ಯಪಾಲರು ಹಿಂದಿ ಪರ ನಿಲುವು ತಾಳುತ್ತಾ ರಾಜ್ಯದ ಹಿತಾಸಕ್ತಿಗೆ ವಿರುದ್ಧವಾಗಿ ನಡೆದುಕೊಳ್ಳುತ್ತಿದ್ದಾರೆ ಎಂದು ಆರೋಪಿಸಲಾಗಿದೆ. ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ತೃತೀಯ ಭಾಷೆಗೆ ಗ್ರೇಡಿಂಗ್ ವ್ಯವಸ್ಥೆ ಜಾರಿಗೆ ತಂದಿರುವ ರಾಜ್ಯ ಸರ್ಕಾರದ ನಿರ್ಧಾರವನ್ನು ಮರುಪರಿಶೀಲಿಸಲು ರಾಜ್ಯಪಾಲರು ಪತ್ರ ಬರೆದಿರುವುದು ಗಂಭೀರ ವಿಷಯವಾಗಿದೆ ಎಂದು ತಿಳಿಸಿದೆ.




ಈ ಕ್ರಮದ ಹಿಂದೆ ರಾಜ್ಯದಲ್ಲಿ ಹಿಂದಿ ಹೇರಿಕೆಯನ್ನು ಶಾಶ್ವತಗೊಳಿಸುವ ಉದ್ದೇಶ ಇದೆ ಎಂದು ಕರವೇ ಆರೋಪಿಸಿದ್ದು, ರಾಜ್ಯಪಾಲರು ತಮ್ಮ ಸಂವಿಧಾನಾತ್ಮಕ ವ್ಯಾಪ್ತಿಯನ್ನು ಮೀರಿ ಆಡಳಿತಾತ್ಮಕ ವಿಚಾರಗಳಲ್ಲಿ ಹಸ್ತಕ್ಷೇಪ ಮಾಡುತ್ತಿದ್ದಾರೆ ಎಂದು ಕಿಡಿಕಾರಿದೆ. ರಾಜ್ಯದ ಶಿಕ್ಷಣ ಮತ್ತು ಭಾಷಾ ನೀತಿಯನ್ನು ನಿರ್ಧರಿಸುವ ಅಧಿಕಾರ ಜನರಿಂದ ಆಯ್ಕೆಯಾದ ರಾಜ್ಯ ಸರ್ಕಾರಕ್ಕೇ ಸೇರಿದೆ ಎಂದು ಸ್ಪಷ್ಟಪಡಿಸಿದೆ.

ಇದಲ್ಲದೆ, "ಬೆಂಗಳೂರು ಸ್ಥಳೀಯ ಭಾಷೆಗಳ ಸಂರಕ್ಷಣಾ ಸಂಘ" ಎಂಬ ಅನಾಮಧೇಯ ಸಂಘಟನೆಯ ಮನವಿಗೆ ತುರ್ತಾಗಿ ಸ್ಪಂದಿಸಿರುವುದೇ ಅನುಮಾನಾಸ್ಪದ ಬೆಳವಣಿಗೆಯಾಗಿದೆ ಎಂದು ಹೇಳಲಾಗಿದೆ. ಕರ್ನಾಟಕವನ್ನು ಹಿಂದಿ ಭಾಷಿಕರ 'ಸುರಕ್ಷಿತ ವಲಸೆ ಕೇಂದ್ರ'ವಾಗಿಸುವ ಯತ್ನಗಳು ನಡೆಯುತ್ತಿವೆ ಎಂಬ ಶಂಕೆಯನ್ನೂ ವ್ಯಕ್ತಪಡಿಸಿದೆ.

ರಾಜ್ಯಪಾಲರ ನಡೆ ಕನ್ನಡದ ಅಸ್ಮಿತೆಗೆ ಧಕ್ಕೆಯಾಗಿದೆ ಎಂದು ಹೇಳಿದ ಕರವೇ, ಅವರ ಕ್ರಮವನ್ನು ರಾಜ್ಯ ಸರ್ಕಾರ ಪರಿಗಣಿಸಬಾರದು ಹಾಗೂ ತೃತೀಯ ಭಾಷೆ ಗ್ರೇಡಿಂಗ್ ವ್ಯವಸ್ಥೆಯಲ್ಲಿ ಯಾವುದೇ ಬದಲಾವಣೆ ಮಾಡುವ ಪ್ರಯತ್ನಗಳಿಗೆ ತೀವ್ರ ವಿರೋಧ ವ್ಯಕ್ತಪಡಿಸಿದೆ.

ಹಿಂದಿ ಹೇರಿಕೆ ವಿರುದ್ಧ ರಾಜ್ಯದಲ್ಲಿ ಹಿಂದೆ ನಡೆದ ಹೋರಾಟಗಳನ್ನು ಉಲ್ಲೇಖಿಸಿ, ಮುಂದೆಯೂ ಕನ್ನಡದ ಗೌರವಕ್ಕಾಗಿ ಹೋರಾಟ ಮುಂದುವರಿಯಲಿದೆ ಎಂದು ಸಂಘಟನೆ ಎಚ್ಚರಿಸಿದೆ. ಈ ಸಂದರ್ಭದಲ್ಲಿ ನಬಿಸಾಬ ಕಿಲ್ಲೇದಾರ, ಲೋಕೇಶ ಸುತಾರ, ಶಿವು ಮಠದ, ಚನ್ನಬಸಯ್ಯ ಗಡ್ಡದೇವರಮಠ, ಶಿವು ಎಸ್. ಮಠದ, ಬಸವರಾಜ ಹೊಗೆಸೊಪ್ಪಿನ, ಶರಣಪ್ಪ ಪುರ್ತಗೇರಿ, ಪ್ರವೀಣ್ ಗಾಣಗೇರ (ಜಿಲ್ಲಾ ಉಪಾಧ್ಯಕ್ಷ), ಗಂಗಾಧರ ಕೋಟಿಗೇರಿಮಠ, ಅರುಣ ಮೆಕ್ಕಿ, ರಹಮಾನ ದರಗಾದ, ಗಂಗಾಧರ ಕೊಂಚಿಗೇರಿಮಠ, ಗೌಸುಸಾಬ ಮಾ. ಶಿರಹಟ್ಟಿ, ರವಿ ಮಲ್ಲಾಡದ, ಇಸಾಕ್ ಅಹ್ಮದ್ ನದಾಫ, ಸಿರಾಜ್ ಹೊಸಮನಿ, ಮಾರುತಿ ಎಲ್. ಈಳಗೇರ, ಕೃಷ್ಣ ಎಸ್. ಲಮಾಣಿ, ವಿಜಯ ಬಡಿಗೇರ, ಶ್ರೀಮತಿ ಆಶಾ ಜೂಲಗುಡ್ಡ, ವಿನಾಯಕ ಬದಿ, ದಾವಲಸಾಬ ತಹಶೀಲ್ದಾರ, ಹುಸೇನ ಅಕ್ಕಿ ಸೇರಿದಂತೆ ಕರವೇ ಕಾರ್ಯಕರ್ತರು ಇದ್ದರು.

### ಭಾಷಾ ನೀತಿಯಲ್ಲಿ ಹಸ್ತಕ್ಷೇಪ ಖಂಡನೆ

* ರಾಜ್ಯಪಾಲರು ಹಿಂದಿ ಪರ ನಿಲುವು ತಾಳಿದ್ದಾರೆ ಎಂಬ ಆರೋಪ
* ಎಸ್‌ಎಸ್‌ಎಲ್‌ಸಿ ತೃತೀಯ ಭಾಷೆ ಗ್ರೇಡಿಂಗ್ ವಿಚಾರಕ್ಕೆ ವಿರೋಧ
* ಸಂವಿಧಾನಾತ್ಮಕ ಮಿತಿ ಮೀರಿ ಹಸ್ತಕ್ಷೇಪ ಮಾಡಿದ ಆರೋಪ
* ರಾಜ್ಯ ಸರ್ಕಾರದ ಅಧಿಕಾರಕ್ಕೆ ಧಕ್ಕೆಯಾಗಿದೆ ಎಂದು ಆಕ್ಷೇಪ
* ರಾಜ್ಯಪಾಲರನ್ನು ಹಿಂಪಡೆಯಲು ಕೇಂದ್ರಕ್ಕೆ ಕರವೇ ಒತ್ತಾಯ
* ಕನ್ನಡ ಅಸ್ಮಿತೆ ರಕ್ಷಿಸಲು ಹೋರಾಟ ಮುಂದುವರಿಸುವ ಎಚ್ಚರಿಕೆ

**ಮುಂಗಾರು ಹಂಗಾಮಿಗೆ ಕಟ್ಟುನಿಟ್ಟಿನ ಕ್ರಮ – ಕಾಳಸಂತೆ, ಅಕ್ರಮ ಮಾರಾಟಕ್ಕೆ ಕಡಿವಾಣ**

## ರಸಗೊಬ್ಬರ ಖರೀದಿಗೆ ರೈತರಿಗೆ FID ಕಡ್ಡಾಯ

**■ ವಿಜಯಸಾಕ್ಷಿ ಸುದ್ದಿ, ಗದಗ**

2026–27ನೇ ಮುಂಗಾರು ಹಂಗಾಮಿನಲ್ಲಿ ರಸಗೊಬ್ಬರಗಳ ಪೂರೈಕೆ ಹಾಗೂ ವಿತರಣೆಯನ್ನು ಸುಗಮಗೊಳಿಸಲು ಕೃಷಿ ಇಲಾಖೆ ಕ್ರಮ ಕೈಗೊಂಡಿದ್ದು, ರೈತರು ರಸಗೊಬ್ಬರ ಖರೀದಿಸಲು ಕಡ್ಡಾಯವಾಗಿ FID ಹೊಂದಿರಬೇಕು ಎಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

ಮಧ್ಯ ಪ್ರಾಚ್ಯ ದೇಶಗಳಲ್ಲಿ ನಡೆಯುತ್ತಿರುವ ಯುದ್ಧದ ಪರಿಣಾಮ ಕಚ್ಚಾ ವಸ್ತುಗಳ ಆಮದು ವ್ಯತ್ಯಯವಾಗುವ ಸಾಧ್ಯತೆ ಇರುವುದರಿಂದ ರಸಗೊಬ್ಬರ ಉತ್ಪಾದನೆಯಲ್ಲಿ ಕುಸಿತವಾಗುವ ಸಾಧ್ಯತೆ ಇದೆ. ಇದರಿಂದ ವಿತರಣೆಯ ಮೇಲೆ ವಿಶೇಷ ನಿಗಾ ವಹಿಸಲಾಗಿದೆ.

ರೈತರ ಹೆಸರಿನಲ್ಲಿ ರಸಗೊಬ್ಬರ ಖರೀದಿ ಮಾಡಿ ಕಾಳಸಂತೆಯಲ್ಲಿ ಮಾರಾಟ ಮಾಡುವುದನ್ನು ತಡೆಯಲು ಕೆ–ಕಿಸಾನ್ ತಂತ್ರಾಂಶದ ಮೂಲಕ ಮಾತ್ರ ರಸಗೊಬ್ಬರ ವಿತರಣೆ ಮಾಡಲಾಗುತ್ತದೆ. ರೈತರ ಭೂಮಿ ಹಾಗೂ ಬೆಳೆಯ ಆಧಾರದಲ್ಲಿ ಅಗತ್ಯ ಪ್ರಮಾಣದ ರಸಗೊಬ್ಬರ ನೀಡಲಾಗುತ್ತದೆ. FID ಹೊಂದಿರುವ ರೈತರು ತಮ್ಮ ಎಲ್ಲಾ ಸರ್ವೆ ನಂಬರ್‌ಗಳನ್ನು ಲಿಂಕ್ ಮಾಡಿಸಿಕೊಳ್ಳಬೇಕು. FID ಇಲ್ಲದವರು ಸಮೀಪದ ರೈತ ಸಂಪರ್ಕ ಕೇಂದ್ರ, ಸಾಮಾನ್ಯ ಸೇವಾ ಕೇಂದ್ರ ಅಥವಾ ಗ್ರಾಮ ಒನ್ ಕೇಂದ್ರಗಳಲ್ಲಿ ▶▶ 4ನೇ ಪುಟಕ್ಕೆ

"ರಸಗೊಬ್ಬರ ವಿತರಣೆಯಲ್ಲಿ ಪಾರದರ್ಶಕತೆಗಾಗಿ FID ಕಡ್ಡಾಯ ಮಾಡಲಾಗಿದೆ."

– **ಜಂಟಿ ಕೃಷಿ ನಿರ್ದೇಶಕರು.**

### ರೈತರಿಗೆ ಪ್ರಮುಖ ಸೂಚನೆಗಳು

* ರಸಗೊಬ್ಬರ ಖರೀದಿಗೆ FID ಕಡ್ಡಾಯ
* ಸರ್ವೆ ನಂಬರ್‌ಗಳನ್ನು FIDಗೆ ಲಿಂಕ್ ಮಾಡಿಸಿ
* FID ಇಲ್ಲದವರು ಸಮೀಪದ ಕೇಂದ್ರಗಳಲ್ಲಿ ನೋಂದಣಿ ಮಾಡಿ
* ಕೆ–ಕಿಸಾನ್ ತಂತ್ರಾಂಶದ ಮೂಲಕ ಮಾತ್ರ ವಿತರಣೆ

### ಮಾರಾಟಗಾರರಿಗೆ ಸೂಚನೆಗಳು:

* FID ದಾಖಲಿಸಿ ಮಾತ್ರ ಮಾರಾಟ
* O–ಫಾರ್ಮ್ ನವೀಕರಣ ಕಡ್ಡಾಯ
* ಅಕ್ರಮ ದಾಸ್ತಾನು, ಕಾಳಸಂತೆ ತಪ್ಪಿಸಬೇಕು
* ನಿಯಮ ಉಲ್ಲಂಘನೆಗೆ ಕಾನೂನು ಕ್ರಮ

## ನಿಧನದ ಬಳಿಕವೂ ಬೆಳಕು ಹಂಚಿದ ಶಕುಂತಲಾ ತಳಕಲ್ಲ



**■ ವಿಜಯಸಾಕ್ಷಿ ಸುದ್ದಿ, ಗದಗ**

ಗದಗಿನ ವೀರನಾರಾಯಣ ದೇವಸ್ಥಾನ ರಸ್ತೆಯ ಪೇಟೆ ವೀರಭದ್ರೇಶ್ವರ ದೇವಸ್ಥಾನದ ಬಳಿಯ ನಿವಾಸಿ ಶ್ರೀಮತಿ ಶಕುಂತಲಾ ಶಿವಪ್ಪ ತಳಕಲ್ಲ (80) ಅವರು ಭಾನುವಾರ ಬೆಳಿಗ್ಗೆ ನಿಧನರಾದರು.

ಮೃತರ ಕುಟುಂಬದವರು ಮಾನವೀಯತೆ ಮೆರೆದಿದ್ದು, ಅವರ ನೇತ್ರಗಳನ್ನು ದಾನ ಮಾಡುವ ಮೂಲಕ ಎರಡು ಜನರ ಬದುಕಿಗೆ ಬೆಳಕು ನೀಡುವ ಮಹತ್ವದ ಕಾರ್ಯ ನೆರವೇರಿಸಿದ್ದಾರೆ. ಗದಗ ಜಿಲ್ಲಾ ಆಸ್ಪತ್ರೆಯ ತಜ್ಞರ ತಂಡ ಸ್ಥಳಕ್ಕಾಗಮಿಸಿ ನೇತ್ರದಾನದ ಪ್ರಕ್ರಿಯೆಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದೆ.

ಈ ಸಂದರ್ಭದಲ್ಲಿ ಗದಗ–ಬೆಟಗೇರಿ ಲಯನ್ಸ್ ಕ್ಲಬ್ ಅಧ್ಯಕ್ಷ ರಾಜು ವೇರ್ಣೆಕರ, ಕಾರ್ಯದರ್ಶಿ ರಾಜಣ್ಣ ಮಲ್ಲಾಡದ, ಖಜಾಂಚಿ ರೇಣುಕಪ್ರಸಾದ ಹಿರೇಮಠ, ಜೊತೆಗೆ ರಮೇಶ್ ಶಿಗ್ಲಿ, ಪ್ರವೀಣ ವಾರಕರ, ವೀರೇಶ ಪಟ್ಟಣಶೆಟ್ಟಿ, ವಿ.ಎಚ್. ದೇಸಾಯಿಗೌಡ್ರ ಸೇರಿದಂತೆ ಹಲವರು ಉಪಸ್ಥಿತರಿದ್ದರು.



**ಎಪ್ರಿಲ್ 10ರಂದು ತಾಲೂಕು ಮಟ್ಟದ ಸಮಾವೇಶ – ಕವಿಗೋಷ್ಠಿ, ಗಾನಸುಧೆ ಸೇರಿದಂತೆ ವೈವಿಧ್ಯಮಯ ಕಾರ್ಯಕ್ರಮಗಳು**

## ಚುಟುಕು ಸಾಹಿತ್ಯ ಸಂಭ್ರಮ: ಕವನ ಸಂಕಲನ ಲೋಕಾರ್ಪಣೆ



**■ ವಿಜಯಸಾಕ್ಷಿ ಸುದ್ದಿ, ರೋಣ**

ಸಾಹಿತ್ಯದ ಉಳಿವು–ಬೆಳವಣಿಗೆ ಜೊತೆಗೆ ಇಂದಿನ ಪೀಳಿಗೆಗೆ ಸಂಸ್ಕಾರದ ಅರಿವು ಅಗತ್ಯವಾಗಿದೆ ಎಂದು ಚುಟುಕು ಸಾಹಿತ್ಯ ಪರಿಷತ್‌ನ ಜಿಲ್ಲಾ ಪ್ರಧಾನ ಕಾರ್ಯದರ್ಶಿ ವಿ.ಬಿ. ಸೋಮನಕಟ್ಟಿಮಠ ಹೇಳಿದರು.

ಪಟ್ಟಣದ ಕನ್ನಡ ಸಾಹಿತ್ಯ ಭವನದಲ್ಲಿ ಸೋಮವಾರ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಚುಟುಕು ಸಾಹಿತ್ಯವು ಕಡಿಮೆ ಪದಗಳಲ್ಲಿ ಜೀವನದ ಆಳವಾದ ಅರ್ಥವನ್ನು ತಿಳಿಸುವ ಶಕ್ತಿಯುತ ಸಾಹಿತ್ಯ ಪ್ರಕಾರವಾಗಿದ್ದು, ಅದನ್ನು ಬೆಳೆಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದರು. ಅನೇಕ ಪ್ರತಿಭೆಗಳು ಮೌನವಾಗಿರುವುದರಿಂದ ಅವರನ್ನು ವೇದಿಕೆಗೆ ತರಲು ಈ ಸಮಾವೇಶ ಆಯೋಜಿಸಲಾಗಿದೆ ಎಂದು ಹೇಳಿದರು.

ಎಪ್ರಿಲ್ 10ರಂದು ಶಾಸಕ ಜಿ.ಎಸ್. ಪಾಟೀಲರ ಹುಟ್ಟುಹಬ್ಬದ ಅಂಗವಾಗಿ ಚುಟುಕು ಸಾಹಿತ್ಯ ಪರಿಷತ್ ವತಿಯಿಂದ ಕವನ ಸಂಕಲನ ಲೋಕಾರ್ಪಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಈ ಸಂದರ್ಭದಲ್ಲಿ ಗೌರವ ಸನ್ಮಾನ, ಕವಿಗೋಷ್ಠಿ, ▶▶ 2ನೇ ಪುಟಕ್ಕೆ

## ಪುರಸಭೆಯಲ್ಲಿ ಬಾಬು ಜಗಜೀವನರಾಂ ಜಯಂತಿ ಆಚರಣೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಪುರಸಭೆಯಲ್ಲಿ ಹಸಿರು ಕ್ರಾಂತಿಯ ಹರಿಕಾರ ಹಾಗೂ ಮಾಜಿ ಉಪಪ್ರಧಾನಿ ಡಾ. ಬಾಬು ಜಗಜೀವನರಾಂ ಅವರ 119ನೇ ಜಯಂತಿಯನ್ನು ರವಿವಾರ ಆಚರಿಸಲಾಯಿತು.

ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ ಅವರು ಬಾಬುಜಿಯವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಡಾ. ಬಾಬು ಜಗಜೀವನರಾಂ ಅವರು ಹಸಿರು ಕ್ರಾಂತಿಯ ಹರಿಕಾರರಾಗಿದ್ದು, ಗ್ರಾಮೀಣ ಕಾರ್ಮಿಕರ ಚಳುವಳಿಯ ಪ್ರಮುಖ ಸಂಘಟಕರಾಗಿದ್ದರು.

ಅವರ ಆದರ್ಶಗಳು, ಚಿಂತನೆಗಳು ಹಾಗೂ ದೇಶ ಸೇವೆ ಸದಾ ಸ್ಮರಣೀಯವಾಗಿವೆ ಎಂದರು.

ಭಾರತದ ಸಂವಿಧಾನ ರಚನಾ ಸಭೆಯ ಸದಸ್ಯರಾಗಿಯೂ, ಉಪಪ್ರಧಾನಿಗಳಾಗಿಯೂ ಸೇವೆ ಸಲ್ಲಿಸಿದ ಅವರು ದೇಶದ ಸರ್ವತೋಮುಖ ಅಭಿವೃದ್ಧಿಗೆ ತಮ್ಮ ಜೀವನವನ್ನೇ ಅರ್ಪಿಸಿದರು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ವ್ಯವಸ್ಥಾಪಕಿ ಮಂಜುಳಾ ಹೂಗಾರ, ಹನುಮಂತ ನಂದೆಣ್ಣವರ, ಶ್ರೀಕಾಂತ ಪೂಜಾರ, ನೇತ್ರಾ ಹೊಸಮನಿ, ಲಕ್ಷ್ಮೀ ಓದು, ಲಲಿತಾ ಶೆಳಕೆ, ಉಮಾ ಬೆಳವಿಗಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಡಿಜಿಟಲ್ ಜನಗಣತಿಗೆ ಚಾಲನೆ: ಸಾರ್ವಜನಿಕರ ಸಹಕಾರ ಅತ್ಯಗತ್ಯ

### 2027ರ ಜನಗಣತಿ ಸಂಪೂರ್ಣ ಆನ್‌ಲೈನ್ – ಗಣತಿದಾರರಿಗೆ ತರಬೇತಿ ಆರಂಭ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

2027ರ ಭಾರತದ ಜನಗಣತಿ ದೇಶದ ಇತಿಹಾಸದಲ್ಲೇ ಮೊದಲ ಬಾರಿಗೆ ಸಂಪೂರ್ಣ ಡಿಜಿಟಲ್ ರೂಪದಲ್ಲಿ ನಡೆಯಲಿದ್ದು, ಸಾರ್ವಜನಿಕರ ಸಹಕಾರ ಅತ್ಯಂತ ಅಗತ್ಯವಾಗಿದೆ ಎಂದು ಗದಗ ಜಿಲ್ಲಾ ಜನಗಣತಿ ತರಬೇತುದಾರ ಬಸವರಾಜ ಗಿರಿತಮ್ಮಣ್ಣವರ ಹೇಳಿದರು.

ಪಟ್ಟಣದ ರೋಟರಿ ಕ್ಲಬ್ ಸಭಾಭವನದಲ್ಲಿ ಪ.ಪಂ ವತಿಯಿಂದ ಆಯೋಜಿಸಿದ್ದ ಗಣತಿದಾರರು ಮತ್ತು ಮೇಲ್ವಿಚಾರಕರ ಎರಡು ದಿನಗಳ ತರಬೇತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.



2027ರ ಮಾರ್ಚ್ 1ರಿಂದ ಆರಂಭವಾಗಲಿರುವ ಈ ಜನಗಣತಿ 16ನೇ ಜನಗಣತಿಯಾಗಿದ್ದು, 2011ರ ನಂತರದ ಮೊದಲ ಮಹತ್ವದ ಸಮೀಕ್ಷೆಯಾಗಿದೆ. ಮನೆಗಳ ಪಟ್ಟಿ ಹಾಗೂ ಜನಸಂಖ್ಯೆ ಎಣಿಕೆ 33 ಪ್ರಶ್ನೆಗಳ ಆಧಾರದ ಮೇಲೆ ಆನ್‌ಲೈನ್ ಅಥವಾ ಮೊಬೈಲ್ ಆಪ್ ಮೂಲಕ ನಡೆಸಲಾಗುತ್ತದೆ ಎಂದು ವಿವರಿಸಿದರು.

ಈ ಬಾರಿ ಕಾಗದರಹಿತ, ಸಂಪೂರ್ಣ ಡಿಜಿಟಲ್ ಪದ್ಧತಿಯಲ್ಲಿ ಗಣತಿ ನಡೆಯಲಿದ್ದು, ಸಾರ್ವಜನಿಕರು ವೆಬ್ ಪೋರ್ಟಲ್ ಅಥವಾ ಮೊಬೈಲ್ ಆಪ್ ಮೂಲಕ ಸ್ವಯಂ ಮಾಹಿತಿಯನ್ನು ಭರ್ತಿ ಮಾಡಬಹುದು. ಕರ್ನಾಟಕದಲ್ಲಿ ಎಪ್ರಿಲ್ 1ರಿಂದ 15ರವರೆಗೆ ಮನೆಗಳ ಪಟ್ಟಿ ಮತ್ತು ಮನೆ ಗಣತಿಯ ಮೊದಲ ಹಂತ ನಡೆಯಲಿದೆ ಎಂದು ಹೇಳಿದರು.

> "ಜನಗಣತಿಯು ಮನೆಗಳ ಸ್ಥಿತಿ, ಸೌಲಭ್ಯಗಳು ಮತ್ತು ಜನಸಂಖ್ಯೆಯ ವಿವರಗಳನ್ನು ಸಂಗ್ರಹಿಸುವ ಪ್ರಮುಖ ಪ್ರಕ್ರಿಯೆಯಾಗಿದ್ದು, ಅಭಿವೃದ್ಧಿ ಯೋಜನೆಗಳು ಹಾಗೂ ಸರ್ಕಾರದ ನೀತಿಗಳ ರೂಪಿಸುವಿಕೆಗೆ ಅಡಿಪಾಯವಾಗಿದೆ. 1948ರ ಜನಗಣತಿ ಕಾಯ್ದೆಯಡಿ ಮಾಹಿತಿ ನೀಡುವುದು ಕಡ್ಡಾಯವಾಗಿದ್ದು, ನಿರಾಕರಿಸಿದರೆ ದಂಡ ಅಥವಾ ಶಿಕ್ಷೆ ವಿಧಿಸುವ ಸಾಧ್ಯತೆ ಇದೆ."
>
> – **ಬಸವರಾಜ ಗಿರಿತಮ್ಮಣ್ಣವರ,** ಗದಗ ಜಿಲ್ಲಾ ಜನಗಣತಿ ತರಬೇತುದಾರ.

ಪ.ಪಂ ಮುಖ್ಯಾಧಿಕಾರಿ ಮಲ್ಲೇಶ ಪಚ್ಚಿ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಆರ್.ಎಸ್. ನರೇಗಲ್ಲ, ವಿ.ಎ. ಕುಂಬಾರ, ಉಪನ್ಯಾಸಕ ಶಿವಾನಂದ ಗೋಗೇರಿ, ಬಾಳು ಕಳಕೊಣ್ಣವರ, ಎಂ.ಎಚ್. ಸೀತಿಮನಿ, ರಮೇಶ್ ಹಲಗಿಯವರ, ಎ.ಎಸ್. ಮೆಣಸಗಿ, ನಜ್ಮಾ ಬೇಲೇರಿ, ಶಂಕ್ರಪ್ಪ ದೊಡ್ಡಣ್ಣವರ, ಆರೀಫ್ ಬೇಗ ಮಿರ್ಜಾ, ನೀಲಪ್ಪ ಚಳ್ಳಮರದ, ಉದಯ ಮುದೇನಗುಡಿ, ಮಣಿಕಂಠ ಹೂಗಾರ, ಕಾವ್ಯಾ ಅರವಟಗಿಮಠ, ಪೂರ್ಣಿಮಾ ಹೊಸಮನಿ, ರೇಣುಕಾ ಕಳಕೊಣ್ಣವರ, ಚಿದಂಬರ ಹುಣಸಿಮರದ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ನಿಖರ ಮಾಹಿತಿ ಸಂಗ್ರಹಣೆಗೆ ಸಮರ್ಪಕ ಕಾರ್ಯ ನಿರ್ವಹಣೆ ಅಗತ್ಯ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ನಗರ ಭಾಗದ ಗಣತಿದಾರರು ಮತ್ತು ಮೇಲ್ವಿಚಾರಕರ ಮೂರು ದಿನಗಳ ತರಬೇತಿ ಕಾರ್ಯಾಗಾರವು ಪಾರ್ವತಿ ಮಕ್ಕಳ ಬಳಗದ ಸಭಾಂಗಣದಲ್ಲಿ ಸೋಮವಾರ ಆರಂಭವಾಯಿತು.



ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದ ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ, ಗಣತಿ ಕಾರ್ಯ ದೇಶದ ಜನಸಂಖ್ಯೆಯ ನಿಖರ ಮಾಹಿತಿ ನೀಡುವ ಪ್ರಮುಖ ಕಾರ್ಯವಾಗಿದ್ದು, ಇದರಲ್ಲಿ ಪ್ರಾಮಾಣಿಕತೆ ಮತ್ತು ಜವಾಬ್ದಾರಿತನ ಅತ್ಯಗತ್ಯ ಎಂದು ಹೇಳಿದರು. ತರಬೇತಿ ಅವಧಿಯಲ್ಲಿ ಗಣತಿದಾರರಿಗೆ ಕಾರ್ಯ ಸುಲಭವಾಗುವಂತೆ ಸಂಪೂರ್ಣ ಮಾಹಿತಿ ನೀಡಲಾಗುತ್ತಿದ್ದು, ಎಲ್ಲರೂ ಶ್ರದ್ಧೆಯಿಂದ ಕರ್ತವ್ಯ ನಿರ್ವಹಿಸಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಮಾಸ್ಟರ್ ಟ್ರೇನರ್‌ಗಳಾದ ಪ್ರೊ.ಎಂ.ಬಿ.ಪಾಟೀಲ, ಪ್ರೊ. ಎಚ್.ಎನ್.ಕೆರೂರ, ಪುರಸಭೆ ವ್ಯವಸ್ಥಾಪಕಿ ಮಂಜುಳಾ ಹೂಗಾರ, ಕಂದಾಯ ಅಧಿಕಾರಿ ಸುರೇಶ ಪೂಜಾರ ಸೇರಿದಂತೆ ಸಿಬ್ಬಂದಿಗಳು ಹಾಜರಿದ್ದರು.

## ಚುಟುಕು ಸಾಹಿತ್ಯ ಸಂಭ್ರಮ: ಕವನ ಸಂಕಲನ ಲೋಕಾರ್ಪಣೆ

▸▸ ಮೊದಲನೇ ಪುಟದಿಂದ

ಗಾನಸುಧೆ, ಜಾನಪದ ಸೊಗಡಿನ ಕಾರ್ಯಕ್ರಮಗಳು ಹಾಗೂ ಸಂಸ್ಕಾರ ವಿಷಯದ ಉಪನ್ಯಾಸವನ್ನು ಆಯೋಜಿಸಲಾಗಿದೆ ಎಂದು ತಿಳಿಸಿದರು. ತಾಲೂಕಿನ ಜನತೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಮನವಿ ಮಾಡಿದರು. ತಾಲೂಕು ಅಧ್ಯಕ್ಷೆ ವೀರುಪಮ್ಮಾ ಹಿರೇಮಠ ಮಾತನಾಡಿ, ಚುಟುಕು ಸಾಹಿತ್ಯವು ನಮ್ಮ ದೈನಂದಿನ ಭಾಷೆಯಲ್ಲೇ ಅಡಗಿರುವ ಅಮೂಲ್ಯ ಅಭಿವ್ಯಕ್ತಿಯಾಗಿದ್ದು, ಅದರ ಮಹತ್ವವನ್ನು ಅರಿಯುವಲ್ಲಿ ನಾವು ಹಿಂದೆ ಬಿದ್ದಿದ್ದೇವೆ ಎಂದು ಹೇಳಿದರು. ಇದು ಜೀವನದಲ್ಲಿ ಹೊಸ ಚೈತನ್ಯ ಮತ್ತು ದೃಷ್ಟಿಕೋನ ನೀಡುವ ಸಾಮರ್ಥ್ಯ ಹೊಂದಿದ್ದು, ಅದರ ಪರಿಚಯವೇ ಈ ಕಾರ್ಯಕ್ರಮದ ಉದ್ದೇಶವಾಗಿದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಸರಕಾರಿ ನೌಕರರ ಸಂಘದ ಅಧ್ಯಕ್ಷ ವಾಯ್.ಡಿ. ಗಾಣಿಗೇರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಬಾಬು ಜಗಜೀವನರಾಂ ಆದರ್ಶಗಳು ಸದಾ ಸ್ಮರಣೀಯ

### ಸಮತಾ ದಿನ ಆಚರಣೆ– ಮಹಾನ್ ನಾಯಕರಿಗೆ ಪುಷ್ಪನಮನ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ದೇಶಸೇವೆಗೆ ಬದುಕನ್ನೇ ಮೀಸಲಿಟ್ಟ ಹಸಿರು ಕ್ರಾಂತಿಯ ಹರಿಕಾರ ಹಾಗೂ ಮಾಜಿ ಉಪಪ್ರಧಾನಿ ಡಾ. ಬಾಬು ಜಗಜೀವನರಾಂ ಅವರ ಆದರ್ಶಗಳು ಮತ್ತು ಚಿಂತನೆಗಳು ಸದಾ ಸ್ಮರಣೀಯವಾಗಿವೆ ಎಂದು ಗ್ರೇಡ್–2 ತಹಸೀಲ್ದಾರ್ ಮಂಜುನಾಥ ಅಮಾಸಿ ಹೇಳಿದರು.

ಪಟ್ಟಣದ ತಹಸೀಲ್ದಾರ್ ಕಚೇರಿಯಲ್ಲಿ ಭಾನುವಾರ ಆಯೋಜಿಸಿದ್ದ ಬಾಬು ಜಗಜೀವನರಾಂ ಅವರ 119ನೇ ಜನ್ಮದಿನಾಚರಣೆ ಹಾಗೂ ಸಮತಾ ದಿನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಅವರ ಶ್ರೇಷ್ಠ ವ್ಯಕ್ತಿತ್ವ ಮತ್ತು ಜೀವನ ಚರಿತ್ರೆಯನ್ನು ತಿಳಿದು ಗೌರವದಿಂದ ಸ್ಮರಿಸುವುದು ಎಲ್ಲರ ಕರ್ತವ್ಯ ಎಂದರು.

> "ಬಾಬು ಜಗಜೀವನರಾಂ ಅವರ ಜೀವನ ಚರಿತ್ರೆ ಹಾಗೂ ಆದರ್ಶಗಳನ್ನು ತಿಳಿದು ಗೌರವಿಸುವುದು ನಮ್ಮ ಕರ್ತವ್ಯ."
>
> – **ಮಂಜುನಾಥ ಅಮಾಸಿ,** ಗ್ರೇಡ್–2 ತಹಸೀಲ್ದಾರ್.

ಈ ಸಂದರ್ಭದಲ್ಲಿ ಸಮಾಜ ಮುಖಂಡರಾದ ಫಕ್ಕೀರೇಶ ಮ್ಯಾಟಣ್ಣವರ ಹಾಗೂ ಬಸವಣ್ಣೆಪ್ಪ ನಂದೆಣ್ಣವರ ಮಾತನಾಡಿ, ಬುದ್ಧ ಮತ್ತು ಬಸವ ತತ್ವಗಳಿಂದ ಪ್ರೇರಿತರಾದ ಬಾಬುಜಿಯವರು ಸಮಾಜದ ಅಂಚಿನವರ ಹಿತಕ್ಕಾಗಿ ಶ್ರಮಿಸಿದ ಮಹಾನ್ ನಾಯಕರು ಎಂದು ಹೇಳಿದರು.

ಭಾರತ ಭೀಕರ ಬರಗಾಲಕ್ಕೆ ತುತ್ತಾದ ಸಂದರ್ಭದಲ್ಲಿ ಕೃಷಿ ಸಚಿವರಾಗಿ ದೇಶವನ್ನು ಆಹಾರ ಉತ್ಪಾದನೆಯಲ್ಲಿ ಸ್ವಾವಲಂಬನೆಗೆ ದೂಡಿದ ಅವರು ಹಸಿರು ಕ್ರಾಂತಿಯ ಹರಿಕಾರರೆಂದು ಪ್ರಸಿದ್ಧಿ ಪಡೆದರು. ಸಂವಿಧಾನ ಸಭೆಯ ಸದಸ್ಯರಾಗಿ ಹಾಗೂ ಉಪಪ್ರಧಾನಿಗಳಾಗಿ ಸೇವೆ ಸಲ್ಲಿಸಿದ ಅವರು ದೇಶದ ಸರ್ವಾಂಗೀಣ ಅಭಿವೃದ್ಧಿಗೆ ತಮ್ಮ ಜೀವನವನ್ನೇ ಅರ್ಪಿಸಿದರು ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಗಳ ಸಿಬ್ಬಂದಿ, ಸಮಾಜದ ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ಗಣತಿದಾರರು ಪ್ರಾಮಾಣಿಕವಾಗಿ ಕಾರ್ಯ ನಿರ್ವಹಿಸಬೇಕು

### ಜನಗಣತಿ ತರಬೇತಿ ಕಾರ್ಯಾಗಾರಕ್ಕೆ ತಹಸೀಲ್ದಾರ್ ಧನಂಜಯ ಎಂ. ಚಾಲನೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಜನಗಣತಿ ಕಾರ್ಯದಲ್ಲಿ ಗಣತಿದಾರರು ಹಾಗೂ ಮೇಲ್ವಿಚಾರಕರ ಪಾತ್ರ ಅತ್ಯಂತ ಪ್ರಮುಖವಾಗಿದ್ದು, ಅವರಿಗೆ ಫೀಲ್ಡ್ ಟ್ರೇನರ್‌ಗಳು ಸಮರ್ಥ ತರಬೇತಿ ನೀಡಿ ಕಾರ್ಯಾರಂಭ ಮಾಡಿಸಬೇಕು ಎಂದು ತಹಸೀಲ್ದಾರ್ ಧನಂಜಯ ಎಂ. ಹೇಳಿದರು.

ಅವರು ಸೋಮವಾರ ಪಟ್ಟಣದ ಬಿಸಿಎನ್ ಪದವಿ ಮತ್ತು ಪದವಿ ಪೂರ್ವ ಕಲಾ ಮಹಾವಿದ್ಯಾಲಯದಲ್ಲಿ ಪ್ರಾರಂಭವಾದ ಮೂರು ದಿನಗಳ ಗಣತಿದಾರರು ಮತ್ತು ಮೇಲ್ವಿಚಾರಕರ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು.

ದೇಶದ ಅಭಿವೃದ್ಧಿ ಯೋಜನೆಗಳ ರೂಪಿಸುವಿಕೆಗೆ ಜನಗಣತಿ ಅಂಕಿ–ಅಂಶಗಳು ಅಡಿಪಾಯವಾಗಿದ್ದು, ಈ ಹಿನ್ನಲೆಯಲ್ಲಿ ಗಣತಿ ಕಾರ್ಯದಲ್ಲಿ ತೊಡಗಿಸಿಕೊಳ್ಳುವ ಅಧಿಕಾರಿಗಳು ಪ್ರಾಮಾಣಿಕತೆ ಹಾಗೂ ಸಮರ್ಪಕತೆಯಿಂದ ಕೆಲಸ ಮಾಡಬೇಕು ಎಂದರು. ಈ ಬಾರಿಯ ಜನಗಣತಿ ಮೊಬೈಲ್ ಆಪ್ ಮೂಲಕ ನಡೆಯಲಿದ್ದು, ನಿಖರತೆ ಮತ್ತು ಪಾರದರ್ಶಕತೆ ಹೆಚ್ಚಿಸಲಿದೆ. ಗಣತಿದಾರರು ತಮ್ಮಗೆ ಹಂಚಿಕೆಯಾಗಿರುವ ಮನೆಗಳಿಗೆ ತೆರಳಿ ಸರಿಯಾದ ಮಾಹಿತಿ ಸಂಗ್ರಹಿಸಬೇಕು ಎಂದು ಸೂಚಿಸಿದರು.

ತಾ.ಪಂ.ಇಓ ಕೃಷ್ಣಪ್ಪ ಧರ್ಮರ ಮಾತನಾಡಿ, ಜನಗಣತಿ ಯಶಸ್ಸಿಗೆ ಬ್ಲಾಕ್‌ಗಳ ರಚನೆ ಪ್ರಮುಖವಾಗಿದ್ದು, ಅಧಿಕಾರಿಗಳು ತಮ್ಮ ವ್ಯಾಪ್ತಿಯ ಪ್ರತಿ ಬ್ಲಾಕ್‌ಗೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ಕ್ಷೇತ್ರಮಟ್ಟದ ಸಿಬ್ಬಂದಿಗಳೊಂದಿಗೆ ಸಮನ್ವಯ ಸಾಧಿಸಿ ಕಾರ್ಯ ನಿರ್ವಹಿಸಬೇಕು ಎಂದು ಹೇಳಿದರು. ತಾಲೂಕಿನಲ್ಲಿ ಸ್ವಯಂ ಗಣತಿ ಕಾರ್ಯ ಎಪ್ರಿಲ್ 1ರಿಂದ 15ರವರೆಗೆ ನಡೆಯಲಿದ್ದು, ಸಾರ್ವಜನಿಕರು ಮೊಬೈಲ್ ಮೂಲಕ ಮಾಹಿತಿ ನೀಡಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಗ್ರೇಡ್–2 ತಹಸೀಲ್ದಾರ್ ಮಂಜುನಾಥ ಅಮಾಸಿ, ಮಾಸ್ಟರ್ ಟ್ರೇನರ್‌ಗಳಾದ ಪ್ರೊ.ಬಿ.ಎಸ್.ಉಗ್ರದ, ಪ್ರೊ.ಪಿ.ಪಿ.ಛಲವಾದಿ, ಪ್ರಾಚಾರ್ಯ ಡಿ.ಎಸ್.ಪ್ಯಾಟಿ, ಉಪತಹಸೀಲ್ದಾರ್ ಪ್ರಶಾಂತ ಕಿಮಾಯಿ ಸೇರಿದಂತೆ ಹಲವರು ಹಾಜರಿದ್ದರು.

# ಅಣ್ಣಿಗೇರಿಯ ಎ.ಎಂ. ಖಾಜಿ ಕಾಂಗ್ರೆಸ್ ಸೇರ್ಪಡೆ

### ಸಿದ್ದರಾಮಯ್ಯ ಸಮ್ಮುಖದಲ್ಲಿ ರಾಜಕೀಯ ಪ್ರವೇಶ



■ವಿಜಯಸಾಕ್ಷಿ ಸುದ್ದಿ, ಅಣ್ಣಿಗೇರಿ

ಹಾವೇರಿ ಜಿಲ್ಲೆಯ ಬ್ಯಾಡಗಿಯಲ್ಲಿ ಎಲ್‌ಐಸಿ ಅಭಿವೃದ್ಧಿ ಅಧಿಕಾರಿಯಾಗಿ ಸೇವೆ ಸಲ್ಲಿಸಿ ನಿವೃತ್ತರಾದ ಸ್ಥಳೀಯ ಎ.ಎಂ. ಖಾಜಿ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸಮ್ಮುಖದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾಗಿ ರಾಜಕೀಯ ಪ್ರವೇಶ ಮಾಡಿದರು.

ಬದಾಮಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಅರಣ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಹಾಗೂ ಬ್ಯಾಡಗಿ ಶಾಸಕ ಬಸವರಾಜ ಶಿವಣ್ಣನವರ ಮತ್ತು ಹಾವೇರಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸಂಜೀವ ನೀರಲಗಿ ಉಪಸ್ಥಿತರಿದ್ದರು.

1994ರಲ್ಲಿ ನವಲಗುಂದ ವಿಧಾನಸಭಾ ಚುನಾವಣೆಯಲ್ಲಿ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದ ಖಾಜಿ ಅವರು ಸುಮಾರು 7 ಸಾವಿರ ಮತಗಳನ್ನು ಪಡೆದು ಗಮನ ಸೆಳೆದಿದ್ದರು. ಅವರ ಜನಪ್ರಿಯತೆಯನ್ನು ಕಂಡ ಮಾಜಿ ಮುಖ್ಯಮಂತ್ರಿ ಎಸ್. ಬಂಗಾರಪ್ಪ ಅವರು ಖಾಜಿ ಅವರನ್ನು ತಮ್ಮ ಕೆಸಿಪಿ ಪಕ್ಷಕ್ಕೆ ಸೇರಿಸಿಕೊಳ್ಳಲು ಸ್ವತಃ ಅಣ್ಣಿಗೇರಿಗೆ ಆಗಮಿಸಿದ್ದರು.

ಆದರೆ ಅದೇ ಸಂದರ್ಭದಲ್ಲಿ ಖಾಜಿ ಅವರಿಗೆ ಎಲ್‌ಐಸಿ ಅಭಿವೃದ್ಧಿ ಅಧಿಕಾರಿಯಾಗಿ ನೇಮಕಾತಿ ಆದೇಶ ಲಭಿಸಿದ್ದರಿಂದ ಅವರು ಸರ್ಕಾರಿ ಸೇವೆಯನ್ನು ಆಯ್ಕೆ ಮಾಡಿಕೊಂಡಿದ್ದರು.

ಅಣ್ಣಿಗೇರಿಯಲ್ಲಿ ಭಾವೈಕ್ಯತೆ ಹಾಗೂ ಸಮಾಜಮುಖಿ ಚಟುವಟಿಕೆಗಳ ಮೂಲಕ ಜನಾನುರಾಗಿಯಾಗಿದ್ದ ಖಾಜಿ ಅವರು ಹಾವೇರಿ ಜಿಲ್ಲೆಯಲ್ಲಿ ಕೂಡ ಜನಪ್ರಿಯತೆ ಗಳಿಸಿದ್ದರು. ಕನ್ನಡ, ಇಂಗ್ಲಿಷ್, ಹಿಂದಿ ಮತ್ತು ಉರ್ದು ಭಾಷೆಗಳಲ್ಲಿ ನಿರರ್ಗಳವಾಗಿ ಮಾತನಾಡುವ ಅವರ ಶೈಲಿ ಜನರನ್ನು ಸೆಳೆದಿದೆ.

ರಾಜಕೀಯ ಪ್ರವೇಶದ ಮೂಲಕ ಇನ್ನಷ್ಟು ವ್ಯಾಪಕವಾಗಿ ಜನಸೇವೆ ಮಾಡಲು ಉದ್ದೇಶ ಹೊಂದಿರುವುದಾಗಿ ಖಾಜಿ ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಡಾ. ಎ.ಎಂ. ಸೌದಾಗರ, ಅಬ್ದುಲ್ ಮುನಾಫ್ ಎರೆಶಿಮಿ, ಅಬ್ದುಲ್ ಮಜೀದ್ ಮುಲ್ಲಾ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಎನ್‌ಎಸ್‌ಎಸ್ ಶಿಬಿರದಿಂದ ನಾಯಕತ್ವ, ಶಿಸ್ತು ಬೆಳೆಸಲು ಸಾಧ್ಯ

### ಗುಲಗಂಜಿಕೊಪ್ಪದಲ್ಲಿ ವಾರ್ಷಿಕ ಶಿಬಿರ–ಮಹಿಳಾ ವಚನಕಾರ್ತಿಯರ ಕೊಡುಗೆ ಕುರಿತು ಮೈತ್ರಾದೇವಿ ಹಿರೇಮಠ ಉಪನ್ಯಾಸ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ವಿದ್ಯಾರ್ಥಿಗಳಲ್ಲಿ ನಾಯಕತ್ವ ಗುಣ, ಶಿಸ್ತು ಹಾಗೂ ಸೇವಾ ಮನೋಭಾವನೆ ಬೆಳೆಸಲು ಸಹಾಯಕವಾಗುತ್ತದೆ ಎಂದು ಸಾಹಿತಿ ಹಾಗೂ ಶಿಕ್ಷಕಿ ಮೈತ್ರಾದೇವಿ ಹಿರೇಮಠ ಹೇಳಿದರು.

ಸಮೀಪದ ಗುಲಗಂಜಿಕೊಪ್ಪದ ದುಂಡಿ ಬಸವೇಶ್ವರ ದೇವಸ್ಥಾನದ ಆವರಣದಲ್ಲಿ ತಾಯಿ ಪಾರ್ವತಿ ಮಕ್ಕಳ ಬಳಗದ ಕಲಾ ಮತ್ತು ವಾಣಿಜ್ಯ ಮಹಿಳಾ ಮಹಾವಿದ್ಯಾಲಯದಿಂದ ಆಯೋಜಿಸಿದ್ದ ಎನ್‌ಎಸ್‌ಎಸ್ ವಾರ್ಷಿಕ ಶಿಬಿರದ ಎರಡನೇ ದಿನದ ಕಾರ್ಯಕ್ರಮದಲ್ಲಿ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕನ್ನಡ ಸಾಹಿತ್ಯದಲ್ಲಿ ಮಹಿಳಾ ವಚನಕಾರ್ತಿಯರ ಕೊಡುಗೆ ಅಪಾರವಾಗಿದ್ದು, ಅವರು ಮೂಢನಂಬಿಕೆ ಮತ್ತು ಜಾತಿ ಪದ್ಧತಿಗಳ ವಿರುದ್ಧ ಹೋರಾಡಿ ಕಾಯಕದ ಮಹತ್ವ ಸಾರಿದ್ದಾರೆ. ಮಹಿಳಾ ಸಬಲೀಕರಣಕ್ಕೆ ಅವರು ನೀಡಿದ ಸಂದೇಶ ಇಂದಿಗೂ ಪ್ರಸ್ತುತವಾಗಿದೆ ಎಂದು ಹೇಳಿದರು.

> "ಎನ್‌ಎಸ್‌ಎಸ್ ವಿದ್ಯಾರ್ಥಿಗಳಲ್ಲಿ ನಾಯಕತ್ವ, ಶಿಸ್ತು ಮತ್ತು ಸೇವಾ ಮನೋಭಾವನೆ ಬೆಳೆಸುತ್ತದೆ."
>
> – **ಮೈತ್ರಾದೇವಿ ಹಿರೇಮಠ,** ಸಾಹಿತಿ,

ಇನ್ನರ್ ವ್ಹೀಲ್ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷೆ ಮಾಲಾದೇವಿ ದಂದರಗಿ ಉಪನ್ಯಾಸ ನೀಡಿ, ಕನ್ನಡ ಸಾಹಿತ್ಯಕ್ಕೆ ಸಾವಿರಾರು ವರ್ಷಗಳ ಇತಿಹಾಸವಿದ್ದು, ವಚನ ಸಾಹಿತ್ಯದಲ್ಲಿ ಜೀವನ ಮೌಲ್ಯಗಳು ಅಡಕವಾಗಿವೆ ಎಂದು ತಿಳಿಸಿದರು.

ಇದೇ ವೇಳೆ ತಾಲೂಕು ಕದಳಿ ಮಹಿಳಾ ವೇದಿಕೆ ಅಧ್ಯಕ್ಷೆ ನಿರ್ಮಲಾ ಅರಳಿ ಹಾಗೂ ಪತ್ರಕರ್ತ ಶಿವಲಿಂಗಯ್ಯ ಹೊತಗಿಮಠ ಮಾತನಾಡಿ, ವಿದ್ಯಾರ್ಥಿಗಳು ಎನ್‌ಎಸ್‌ಎಸ್ ಶಿಬಿರದಲ್ಲಿ ಕಲಿತ ಗುಣಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ವಿವಿಧ ಗಣ್ಯರು, ಉಪನ್ಯಾಸಕರು, ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿನಿಯರು ಭಾಗವಹಿಸಿದ್ದರು.

# ದೂದಪೀರಾಂ ಉರುಸು: ಶಾಂತಿ, ಸಹೋದರತೆಯ ಸಂದೇಶ

▶▶ ಮೊದಲನೇ ಪುಟದಿಂದ

> "ಪರೋಪಕಾರವೇ ನಿಜವಾದ ಜೀವನ, ಸಹೋದರತೆಯಿಂದ ಬದುಕಿದಾಗ ಶಾಂತಿ ನೆಲೆಸುತ್ತದೆ."
> **– ಹಾಶೀಮಿಯ್ಯಾ ಆಶ್ರಫಿ, ಧರ್ಮಗುರು.**

ಹಾಶೀಮಿಯ್ಯಾ ಆಶ್ರಫಿ ಮಾತನಾಡಿ, ಮಹಾತ್ಮರು, ಶರಣರು, ಸಂತರು ಮತ್ತು ದಾಸರು ಜಗತ್ತಿನ ಶಾಂತಿಗಾಗಿ ಅಪಾರ ಶ್ರಮ ಪಟ್ಟಿದ್ದಾರೆ ಎಂದು ಹೇಳಿದರು.

ಅವರ ತತ್ವಾದರ್ಶಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಸಮಾಜದಲ್ಲಿ ಶಾಂತಿ ಮತ್ತು ಸಹೋದರತೆ ಸ್ಥಾಪನೆಯಾಗುತ್ತದೆ. ಪರರನ್ನು ಹಿಂಸಿಸುವುದು ಮಾನವೀಯತೆ ಅಲ್ಲ, ಪರೋಪಕಾರವೇ ನಿಜವಾದ ಜೀವನ ಎಂದು ಅವರು ತಿಳಿಸಿದರು.

ಸೂಫಿ ಸಂತ ದೂದಪೀರಾಂ ಮಹಾತ್ಮರು ಬಾಗ್ದಾದ್‌ನಿಂದ ಲಕ್ಷ್ಮೇಶ್ವರಕ್ಕೆ ಬಂದು ಅನೇಕ ಪವಾಡಗಳನ್ನು ತೋರಿದ ಇತಿಹಾಸವಿದೆ. ಇಂದಿಗೂ ಅವರ ಗದ್ದುಗೆ ಸ್ಥಳದಲ್ಲಿ ಅದ್ಭುತ ಘಟನೆಗಳು ನಡೆಯುತ್ತಿವೆ ಎಂದು ಭಕ್ತರು ನಂಬಿಕೆ ವ್ಯಕ್ತಪಡಿಸುತ್ತಿದ್ದಾರೆ.

ಕಾರ್ಯಕ್ರಮದಲ್ಲಿ ದೂದಪೀರಾಂ ಸಮಿತಿ, ಅಂಜುಮನ್ ಇಸ್ಲಾಂ ಸಮಿತಿ ಅಧ್ಯಕ್ಷರು, ಸದಸ್ಯರು ಹಾಗೂ ವಿವಿಧ ಜಾತಿಗಳ ಮುಖಂಡರು ಭಾಗವಹಿಸಿದ್ದರು.

# ಕುಸ್ತಿ ಕಣದಲ್ಲೇ ಕಂಗೊಳಿಸಿದ ಮುತ್ತು ಪೈಲ್ವಾನ್

## ವಾರಗಿ-ಪರಸಿ ಪೈಕಿ ಕುಸ್ತಿಯಲ್ಲಿ ಎದುರಾಳಿಗಳನ್ನು ಮಣಿಸಿ ಗೆಲುವಿನ ಖಡ್ಗ ಧರಿಸಿದ ಪೈಲ್ವಾನ್

**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಕೋಡಿಯಲ್ಲಮ್ಮ ದೇವಿ ದೇವಸ್ಥಾನದ ಜಾತ್ರಾ ಮಹೋತ್ಸವ ಅಂಗವಾಗಿ ಮೂರು ದಿನಗಳ ಕಾಲ ದೇವಸ್ಥಾನದ ಬಯಲಿನಲ್ಲಿ ನಡೆದ ಮುಕ್ತ ಕುಸ್ತಿ ಪಂದ್ಯಾವಳಿಗಳು ಪ್ರೇಕ್ಷಕರ ಮನಸೆಳೆಯುವಂತಾಯಿತು.



ಸೋಮವಾರ ಗೋಧೂಳಿ ಸಮಯದಲ್ಲಿ ನಡೆದ ವಾರಗಿ ಪೈಕಿ-ಪರಸಿ ಪೈಕಿ ಕುಸ್ತಿ ಅಂತಿಮ ಪಂದ್ಯಾವಳಿಯಲ್ಲಿ ಲಕ್ಕುಂಡಿಯ ಪೈಲ್ವಾನ್ ಮುತ್ತು ಭಾವಿ ಅದ್ಭುತ ಪ್ರದರ್ಶನ ನೀಡಿ ವಿಜಯದ ಖಡ್ಗ ಧರಿಸಿ ಗೆಲುವಿನ ಮಾಲೆ ಅಲಂಕರಿಸಿದರು.

ಮೊದಲು ವಾರಗಿ ಪೈಕಿ ಕುಸ್ತಿಯಲ್ಲಿ ಲಕ್ಕುಂಡಿಯ ಮುತ್ತು ಭಾವಿ ಮತ್ತು ಯಳವತ್ತಿಯ ಶಿದ್ದಲಿಂಗೇಶ ನಡುವಿನ ಕಾದಾಟದಲ್ಲಿ ಮುತ್ತು ಭಾವಿ ಜಯಶಾಲಿಯಾಗಿ ಬೆಳ್ಳಿ ಕಡಗ ಹಾಗೂ ನಗದು ಬಹುಮಾನ ಪಡೆದುಕೊಂಡರು. ಬಳಿಕ ಪರಸಿ ಪೈಕಿ ಕುಸ್ತಿಯಲ್ಲಿ ಬೊಮ್ಮನಹಳ್ಳಿಯ ನಿಂಗಪ್ಪ ವಿರುದ್ಧ 40 ನಿಮಿಷಗಳ ಕಾಲ ನಡೆದ ರೋಚಕ ಕಾಳಗದಲ್ಲೂ ಮುತ್ತು ಪೈಲ್ವಾನ್ ಮತ್ತೆ ಗೆಲುವು ಸಾಧಿಸಿ ದ್ವಿಪಾತ್ರ ವಿಜಯ ಸಾಧಿಸಿದರು.

ಕುಸ್ತಿ ಕಣದಲ್ಲಿನ ವಿವಿಧ ಭಂಗಿಗಳು, ಪಟ್ಟುಗಳು ಮತ್ತು ಕರಾಮತ್ತುಗಳು ಪ್ರೇಕ್ಷಕರಲ್ಲಿ ಮೈನವಿರೇಳಿಸುವಂತಾಗಿದ್ದವು. ಲಕ್ಕುಂಡಿ, ಹಾವೇರಿ, ಬೊಮ್ಮನಹಳ್ಳಿ, ಧಾರವಾಡ, ಹುಯಿಲಗೋಳ, ಹನುಮನಾಳ, ಶಿರಹಟ್ಟಿ, ಬಾಳೆಹೊಸೂರು, ರಾಣೆಬೆನ್ನೂರು, ಬ್ಯಾಡಗಿ, ಬಡಮಲ್ಲಿ, ಕಲಘಟಗಿ ಸೇರಿದಂತೆ ಅನೇಕ ಪ್ರದೇಶಗಳಿಂದ 40ಕ್ಕೂ ಹೆಚ್ಚು ಜೋಡಿಗಳು ಸ್ಪರ್ಧೆಯಲ್ಲಿ ಭಾಗವಹಿಸಿದ್ದವು.

ಬಹುಮಾನ ಸ್ವೀಕರಿಸಿದ ಬಳಿಕ ಮಾತನಾಡಿದ ಮುತ್ತು ಭಾವಿ ಪೈಲ್ವಾನ್, ಕುಸ್ತಿ ನಮ್ಮ ಹಿರಿಯರಿಂದ ಬಂದಿರುವ ಜಾನಪದ ಗ್ರಾಮೀಣ ಕ್ರೀಡೆಯಾಗಿದ್ದು, ಸಂಸ್ಕೃತಿ ಮತ್ತು ಪರಂಪರೆಯ ಪ್ರತೀಕವಾಗಿದೆ. ಇಂತಹ ಕ್ರೀಡೆಗಳನ್ನು ಉಳಿಸಿ ಬೆಳೆಸುವುದು ಎಲ್ಲರ ಜವಾಬ್ದಾರಿ ಎಂದು ಹೇಳಿದರು.

ಜಾತ್ರಾ ಮಹೋತ್ಸವದ ಅಂಗವಾಗಿ ಈ ಕುಸ್ತಿ ಪಂದ್ಯಾವಳಿಯನ್ನು ದೇವಸ್ಥಾನ ಸೇವಾ ಸಮಿತಿ, ಭಕ್ತಮಂಡಳಿ ಮತ್ತು ಪಟ್ಟಣದ ಹಿರಿಯರು ನಿರಂತರವಾಗಿ ನಡೆಸುತ್ತಿರುವುದು ಶ್ಲಾಘನೀಯ ಎಂದರು.

ಕಾರ್ಯಕ್ರಮದಲ್ಲಿ ಕೋಡಿಯಲ್ಲಮ್ಮ ದೇವಿ ದೇವಸ್ಥಾನದ ಸಮಿತಿ ಸದಸ್ಯರು, ಪಟ್ಟಣದ ಹಿರಿಯರು, ಪೈಲ್ವಾನರು ಮತ್ತು ಕುಸ್ತಿ ಪ್ರೇಮಿಗಳು ಹಾಜರಿದ್ದರು.

# ಲಿಂಗಾಯತ ಸಮಾಜ ಒಗ್ಗೂಡಿಸುವುದು ಅಗತ್ಯ



**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯ ಒಳಪಂಗಡಗಳು ಒಂದಾಗಿ ಸಾಗುವುದು ಇಂದಿನ ದಿನಗಳಲ್ಲಿ ಅತ್ಯಂತ ಅಗತ್ಯವಾಗಿದೆ ಎಂದು ಮಹಾಸಭೆಯ ಜಿಲ್ಲಾಧ್ಯಕ್ಷ ಶರಣಬಸವ ಗುಡಿಮನಿ ಹೇಳಿದರು.

ಪಟ್ಟಣದ ಜಗದ್ಗುರು ವೀರಗಂಗಾಧರ ಸಮುದಾಯ ಕಲ್ಯಾಣ ಮಂಟಪದಲ್ಲಿ ನಡೆದ ತಾಲೂಕ ಮಟ್ಟದ ಸದಸ್ಯತ್ವ ಅಭಿಯಾನ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಹಾಸಭೆ ಶತಮಾನಗಳ ಇತಿಹಾಸ ಹೊಂದಿದ್ದು, ಶ್ರೀ ಹಾನಗಲ ಗುರು ಕುಮಾರೇಶ್ವರರ ಸಂಕಲ್ಪದಂತೆ ಸಮಾಜದ ಪ್ರತಿಯೊಬ್ಬರೂ ಒಂದಾಗಬೇಕು. ಭಿನ್ನಾಭಿಪ್ರಾಯಗಳನ್ನು ಬದಿಗಿಟ್ಟು ಸಂಘಟಿತವಾಗಿ ಸಮಾಜ ಕಟ್ಟುವಲ್ಲಿ ಎಲ್ಲರೂ ಶ್ರಮಿಸಬೇಕು ಎಂದು ಕರೆ ನೀಡಿದರು. ಈ ವೇಳೆ ಜಿಲ್ಲಾ ಸಲಹಾ ಸಮಿತಿ ಸದಸ್ಯ ಚಂದ್ರು ಬಾಳಿಹಳ್ಳಿಮಠ ಮಾತನಾಡಿ, ಸದಸ್ಯತ್ವ ಅಭಿಯಾನದಲ್ಲಿ ಪ್ರತಿಯೊಬ್ಬರೂ ಸಕ್ರಿಯವಾಗಿ ಭಾಗವಹಿಸಬೇಕು. ವೀರಶೈವ ಲಿಂಗಾಯತ ಸಮಾಜದಲ್ಲಿ ಯಾವುದೇ ಗೊಂದಲ ಇಲ್ಲದೆ ಎಲ್ಲ ಒಳಪಂಗಡಗಳನ್ನು ಒಗ್ಗೂಡಿಸುವುದು ಮುಖ್ಯ ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮುರುಗೇಂದ್ರ ಬಡ್ನಿ, ಉಪಾಧ್ಯಕ್ಷ ಬಸವರಾಜ ಅಂಗಡಿ, ಖಜಾಂಚಿ ಚನವೀರಪ್ಪ ಹುಣಸಿಕಟ್ಟಿ, ನಿರ್ದೇಶಕ ಬಾಪೂಜಿ ಪಾಟೀಲ ಸೇರಿದಂತೆ ಹಲವರು ಉಪಸ್ಥಿತರಿದ್ದು ಸಲಹೆ-ಸೂಚನೆಗಳನ್ನು ನೀಡಿದರು.

# ಶರಣ ಸಂಸ್ಕೃತಿಯ ಪ್ರತೀಕ ಅಕ್ಕಮಹಾದೇವಿ

## ಹಗರಿಬೊಮ್ಮನಹಳ್ಳಿಯಲ್ಲಿ ಅಕ್ಕಮಹಾದೇವಿ ಜಯಂತಿ ಹಾಗೂ ಮಹಿಳಾ ದಿನಾಚರಣೆಯಲ್ಲಿ ಪುಷ್ಪಲೀಲಾ ಬಾವಿಬೆಟ್ಟಪ್ಪ

**■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಪಟ್ಟಣದ ಪಂಚಮಸಾಲಿ ಭವನದಲ್ಲಿ ತಾಲೂಕು ವೀರಶೈವ ಲಿಂಗಾಯತ ಪಂಚಮಸಾಲಿ ಮಹಿಳಾ ಘಟಕದ ವತಿಯಿಂದ ಅಕ್ಕಮಹಾದೇವಿ ಜಯಂತಿ ಹಾಗೂ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಆಚರಿಸಲಾಯಿತು.



ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಮಹಿಳಾ ಘಟಕದ ಗೌರವಾಧ್ಯಕ್ಷೆ ಪುಷ್ಪಲೀಲಾ ಬಾವಿಬೆಟ್ಟಪ್ಪ, ಶರಣೆ ಅಕ್ಕಮಹಾದೇವಿ ಅವರು ಧಾರ್ಮಿಕ ಹಾಗೂ ನೈತಿಕ ಮೌಲ್ಯಗಳ ಮೂಲಕ ಜೀವನವನ್ನು ಹಸನಾಗಿಸುವ ಸಂದೇಶವನ್ನು ತಮ್ಮ ಬದುಕಿನ ಮೂಲಕವೇ ತೋರಿಸಿದ್ದಾರೆ ಎಂದು ಹೇಳಿದರು.

ನಗರ ಘಟಕದ ಉಪಾಧ್ಯಕ್ಷೆ ಕೊಟ್ಟೂರೇಶ್ವರಿ ಮಲ್ಲಿಕಾರ್ಜುನ ಪ್ರಾಸ್ತಾವಿಕವಾಗಿ ಮಾತನಾಡಿ, ಒಡಕಿನ ಭಾವನೆಗಳನ್ನು ಬಿಟ್ಟು ಒಡಲ ಭಾವನೆಗಳನ್ನು ಬೆಳೆಸಿಕೊಳ್ಳಬೇಕು. ಅಲ್ಲಮಪ್ರಭು ಮತ್ತು ಅಕ್ಕಮಹಾದೇವಿ ಸಂಭಾಷಣೆ ಶರಣ ಸಂಸ್ಕೃತಿಯ ಮಹತ್ವವನ್ನು ಎತ್ತಿಹಿಡಿಯುತ್ತದೆ ಎಂದು ಹೇಳಿದರು.

ತಾಲೂಕು ಉಪಾಧ್ಯಕ್ಷೆ ರೇಖಾ ವಿರೂಪಾಕ್ಷ ಮಾತನಾಡಿ, ಮಹಿಳಾ ಸಮಾನತೆ ಹಾಗೂ ಶರಣ ತತ್ವಗಳನ್ನು ವಿಶ್ವಕ್ಕೆ ಸಾರಿದ ಹಿರಿಮೆ ಅಕ್ಕಮಹಾದೇವಿಗೆ ಸಲ್ಲುತ್ತದೆ ಎಂದು ಹೇಳಿದರು. ವಕೀಲರಾದ ಶ್ರೀದೇವಿ ಹವಾಲ್ದಾರ್ ಮಾತನಾಡಿ, ಮಹಿಳೆ ಸವಾಲುಗಳನ್ನು ಎದುರಿಸುವ ಶಕ್ತಿ ಹೊಂದಿದ್ದು, ಮಹಿಳೆಯರ ಮೇಲಿನ ದೌರ್ಜನ್ಯ ತಡೆಗೆ ಕಾನೂನುಗಳು ಇದ್ದು ಅವುಗಳ ಅರಿವು ಅಗತ್ಯ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ವಿವಿಧ ಪದಾಧಿಕಾರಿಗಳು ಹಾಗೂ ಮಹಿಳಾ ಸದಸ್ಯರು ಭಾಗವಹಿಸಿದ್ದರು.

> "ಅಕ್ಕಮಹಾದೇವಿ ಅವರ ತತ್ವಗಳು ಮಹಿಳಾ ಸಮಾನತೆ ಹಾಗೂ ನೈತಿಕ ಮೌಲ್ಯಗಳಿಗೆ ದಾರಿದೀಪ."
> **– ಪುಷ್ಪಲೀಲಾ ಬಾವಿಬೆಟ್ಟಪ್ಪ,** ಮಹಿಳಾ ಘಟಕದ ಗೌರವಾಧ್ಯಕ್ಷೆ.

## ಪ್ರತಿ ಗ್ರಾಮದಲ್ಲಿ ಧ್ವಜಾರೋಹಣ-ಸಂಘಟನೆ ಶಕ್ತಿಯಿಂದ ಬಿಜೆಪಿ ವಿಶ್ವದ ಅತಿದೊಡ್ಡ ಪಕ್ಷ

# ಡಂಬಳ ಹೋಬಳಿಯಾದ್ಯಂತ ಬಿಜೆಪಿ ಸಂಸ್ಥಾಪನಾ ದಿನಾಚರಣೆ



**■ ವಿಜಯಸಾಕ್ಷಿ ಸುದ್ದಿ, ಡಂಬಳ**

ಭಾರತೀಯ ಜನತಾ ಪಕ್ಷದ ಸಂಸ್ಥಾಪನಾ ದಿನದ ಅಂಗವಾಗಿ ಎಪ್ರಿಲ್ 6ರಂದು ಡಂಬಳ ಹೋಬಳಿಯ ವಿವಿಧ ಗ್ರಾಮಗಳಲ್ಲಿ ಧ್ವಜಾರೋಹಣ ಕಾರ್ಯಕ್ರಮಗಳು ಜರುಗಿದವು.

> "ಕಾರ್ಯಕರ್ತರ ತ್ಯಾಗ ಮತ್ತು ಸಂಘಟನೆಯ ಶಕ್ತಿಯಿಂದ ಬಿಜೆಪಿ ವಿಶ್ವದ ಅತಿದೊಡ್ಡ ಪಕ್ಷವಾಗಿದೆ."
> **– ಅಂದಪ್ಪ ಹಾರೂಗೇರಿ,** ಮಂಡಲ ಅಧ್ಯಕ್ಷ, ಡಂಬಳ ಹೋಬಳಿ.

ಮೇವುಂಡಿ ಗ್ರಾಮದ ಬೂತ್ ಸಂಖ್ಯೆ 250ರಲ್ಲಿ ಬೂತ್ ಅಧ್ಯಕ್ಷ ಕೋಟೇಶ ಸಿಂದೋಗಿಯವರ ನಿವಾಸದಲ್ಲಿ ಧ್ವಜಾರೋಹಣ ಮಾಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಈ ವೇಳೆ ಮಾತನಾಡಿದ ಡಂಬಳ ಮಂಡಲ ಅಧ್ಯಕ್ಷ ಅಂದಪ್ಪ ಹಾರೂಗೇರಿ, ದೇಶದ ವಿವಿಧ ರಾಜ್ಯಗಳಲ್ಲಿ ಲಕ್ಷಾಂತರ ಕಾರ್ಯಕರ್ತರ ಪರಿಶ್ರಮ, ತ್ಯಾಗ ಹಾಗೂ ಸಂಘಟನಾ ಶಕ್ತಿಯಿಂದ ಬಿಜೆಪಿ ವಿಶ್ವದ ಅತಿದೊಡ್ಡ ರಾಜಕೀಯ ಪಕ್ಷವಾಗಿ ಬೆಳೆದಿದೆ ಎಂದು ಹೇಳಿದರು.

ಸಂಘಟನೆ, ಸಮರ್ಪಣೆ, ಸಂಘರ್ಷ ಮತ್ತು ಸೇವೆಯ ತತ್ವಗಳನ್ನು ಅಳವಡಿಸಿಕೊಂಡು ಪಕ್ಷವನ್ನು ಕಟ್ಟಿಬೆಳೆಸಿದ ಹಿರಿಯ ನಾಯಕರ ಸೇವೆಯನ್ನು ಸ್ಮರಿಸಬೇಕು. ರೋಣ ಮತಕ್ಷೇತ್ರದಲ್ಲಿ ಮಾಜಿ ಸಚಿವ ಕಳಕಪ್ಪ ಬಂಡಿ ಅವರ ಮಾರ್ಗದರ್ಶನದಲ್ಲಿ ಪಕ್ಷವನ್ನು ಮತ್ತಷ್ಟು ಬಲಪಡಿಸಲಾಗುತ್ತಿದೆ ಎಂದು ತಿಳಿಸಿದರು.

ಎಸ್‌ಸಿ ಮೋರ್ಚಾ ಅಧ್ಯಕ್ಷ ಕೃಷ್ಣ ಬಂಡಿ ಮಾತನಾಡಿ, ಪಕ್ಷದ ಸಂಸ್ಥಾಪಕರ ಆದರ್ಶಗಳು ಹಾಗೂ ಕಾರ್ಯಕರ್ತರ ನಿಷ್ಠೆಯೇ ಬಿಜೆಪಿಯನ್ನು ಈ ಮಟ್ಟಕ್ಕೆ ತಂದಿದೆ. ಗ್ರಾಮ ಮಟ್ಟದಲ್ಲಿ ಪಕ್ಷವನ್ನು ಇನ್ನಷ್ಟು ಗಟ್ಟಿಗೊಳಿಸಲು ಎಲ್ಲರೂ ಒಗ್ಗಟ್ಟಿನಿಂದ ಕೆಲಸ ಮಾಡಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಕಾರ್ಯದರ್ಶಿ ಪಂಚಾಕ್ಷರಯ್ಯ ಹರ್ಲಾಪುರಮಠ, ಹಿರಿಯರಾದ ಮೈಲಾರೆಪ್ಪ ನೋಟಗಾರ, ಗೋಪಾಲ ವಾಲಿಕಾರ, ದೇವಪ್ಪ ತಾಮ್ರಗುಂಡಿ, ಜಿಲ್ಲಾ ಯುವ ಮೋರ್ಚಾ ಉಪಾಧ್ಯಕ್ಷ ರಾಜೇಶ ಅರಕಾಲ ಸೇರಿದಂತೆ ಅನೇಕ ಕಾರ್ಯಕರ್ತರು ಭಾಗವಹಿಸಿದ್ದರು.

# ರೋಣ ಉದ್ಯೋಗ ಮೇಳಕ್ಕೆ ನಟಿ ಕಾರುಣ್ಯ ರಾಮ್ ಆಗಮನ

**■ ವಿಜಯಸಾಕ್ಷಿ ಸುದ್ದಿ, ರೋಣ**




ಪಟ್ಟಣದಲ್ಲಿ ಶಾಸಕ ಜಿ.ಎಸ್. ಪಾಟೀಲ ಅವರ ಹುಟ್ಟುಹಬ್ಬದ ಅಂಗವಾಗಿ ಎಪ್ರಿಲ್ 10ರಂದು ಅಭಿಮಾನಿ ಬಳಗದ ವತಿಯಿಂದ ಭಾರೀ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ. ಈ ಮೇಳಕ್ಕೆ ಖ್ಯಾತ ಚಲನಚಿತ್ರ ನಟಿ ಕಾರುಣ್ಯ ರಾಮ್ ಮುಖ್ಯ ಅತಿಥಿಯಾಗಿ ಆಗಮಿಸಲಿದ್ದಾರೆ.

ಮೇಳದ ಅಂಗವಾಗಿ, ಮಹಿಳೆಯರ ಸ್ವ ಉದ್ಯೋಗದ ಬಗ್ಗೆ ವಿಶೇಷ ಸಂವಾದವನ್ನು ನಡೆಸಲಿರುವ ಅವರು, ಮಹಿಳೆಯರು ತಾವು ತಯಾರಿಸುವ ಉತ್ಪನ್ನಗಳನ್ನು ಬೇರೆ ನಗರಗಳು ಹಾಗೂ ರಾಜ್ಯಗಳಿಗೆ ಹೇಗೆ ಪರಿಣಾಮ ಕಾರಿಯಾಗಿ ಮಾರಾಟ ಮಾಡಬಹುದು ಎಂಬುದರ ಕುರಿತು ಮಾರ್ಗದರ್ಶನ ನೀಡಲಿದ್ದಾರೆ.

ಈ ಉದ್ಯೋಗ ಮೇಳದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರು ಹಾಗೂ ಯುವತಿಯರು ಭಾಗವಹಿಸಿ, ಉದ್ಯೋಗಾವಕಾಶಗಳನ್ನು ಪಡೆದುಕೊಂಡು ಕುಟುಂಬದ ಆರ್ಥಿಕ ಸ್ಥಿತಿಯನ್ನು ಬಲಪಡಿಸಿಕೊಳ್ಳಬೇಕು ಎಂದು ಸ್ಪಂದನಾ ಮಹಿಳಾ ಮಂಡಳ ಅಧ್ಯಕ್ಷರಾದ ಶಶಿಕಲಾ ಪಾಟೀಲ ಕರೆ ನೀಡಿದ್ದಾರೆ.

# ನಿಧನ

## ದುರಗಮ್ಮ ತಳಗೇರಿ



**ಡಂಬಳ:** ಗ್ರಾಮದ ಡಾ.ಬಿ.ಅರ್.ಅಂಬೇಡ್ಕರ್ ನಗರದ ಮಾದಿಗ ಸಮುದಾಯದ ಹಿರಿಯರಾದ ದುರಗಮ್ಮ ಹನಮಪ್ಪ ತಳಗೇರಿ(75 ) ಶನಿವಾರ ನಿಧನ ಹೊಂದಿದರು.

ಮೃತರು ಓರ್ವ ಪುತ್ರ, ಇಬ್ಬರು ಪುತ್ರಿಯರು, ಸೊಸೆಯಂದಿರು ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು ಬಳಗ ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ರವಿವಾರ ಮಧ್ಯಾಹ್ನ ಡಂಬಳ ಗ್ರಾಮದ ರುದ್ರಭೂಮಿಯಲ್ಲಿ ನಡೆಯಿತು.

# ಒಲಿಂಪಿಯಾಡ್‌ನಲ್ಲಿ ದೇಶಕ್ಕೆ ಪ್ರಥಮ ಸ್ಥಾನ: ಅಲಿಯಾ ಬೇಗಂಗೆ ಸನ್ಮಾನ




**■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ತಾಲೂಕಿನ ನೆಹರು ನಗರ ವ್ಯಾಪ್ತಿಯಲ್ಲಿ 2025-26ನೇ ಸಾಲಿನ ಒಲಿಂಪಿಯಾಡ್ 6.0 ಪರೀಕ್ಷೆಯಲ್ಲಿ ವಿಜ್ಞಾನ ವಿಷಯದಲ್ಲಿ ಅಲಿಯಾ ಬೇಗಂ ದೇಶದ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದು ಗಮನ ಸೆಳೆದಿದ್ದಾರೆ.

ಕೇಂದ್ರ ಸರ್ಕಾರದ ಸಹಭಾಗಿತ್ವದಲ್ಲಿ ನಡೆದ ಈ ಪರೀಕ್ಷೆಗೆ ತಾಲೂಕಿನ 3ನೇ ತರಗತಿಯಿಂದ 12ನೇ ತರಗತಿವರೆಗೆ ಒಟ್ಟು 416 ವಿದ್ಯಾರ್ಥಿಗಳನ್ನು ಶ್ರೀ ಕ್ಷೇತ್ರ ಧರ್ಮಸ್ಥಳ ಯೋಜನೆಯಡಿ ಅಖಿಲ ಕೇಂದ್ರದ ಮೂಲಕ ನೋಂದಣಿ ಮಾಡಿಸಲಾಗಿತ್ತು.

> "ಮಕ್ಕಳನ್ನು ದೇಶದ ಆಸ್ತಿಯಾಗಿ ರೂಪಿಸುವುದೇ ನಮ್ಮ ಗುರಿ."
> **– ಸತೀಶ್ ಶೆಟ್ಟಿ, ಜಿಲ್ಲಾ ನಿರ್ದೇಶಕ.**

ಅಂತಿಮ ಪರೀಕ್ಷೆಯಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಪ್ರಮಾಣಪತ್ರ ವಿತರಿಸಲಾಯಿತು. ಈ ವೇಳೆ ಸರಸ್ವತಿ ಸಂಘದ ಸದಸ್ಯರ ಮಗಳಾದ ಅಲಿಯಾ ಬೇಗಂ ವಿಜ್ಞಾನ ವಿಭಾಗದಲ್ಲಿ ದೇಶಕ್ಕೆ ಪ್ರಥಮ ಸ್ಥಾನ ಗಳಿಸಿದ ಹಿನ್ನೆಲೆಯಲ್ಲಿ ವಿಶೇಷವಾಗಿ ಸನ್ಮಾನಿಸಲಾಯಿತು.

ಇದೇ ವೇಳೆ ಬ್ಯಾಲಾಹುಣಿಸಿ ಗ್ರಾಮದ ಡಿ. ಪ್ರಥಮ್ ಇಂಗ್ಲಿಷ್ ವಿಷಯದಲ್ಲಿ ದ್ವಿತೀಯ ಸ್ಥಾನ ಪಡೆದು ಪ್ರಶಂಸೆಗೆ ಪಾತ್ರರಾದರು.

ಕಾರ್ಯಕ್ರಮದಲ್ಲಿ ವಿಜಯನಗರ ಜಿಲ್ಲಾ ನಿರ್ದೇಶಕ ಸತೀಶ್ ಶೆಟ್ಟಿ ಮಾತನಾಡಿ, ಶ್ರೀ ಕ್ಷೇತ್ರ ಧರ್ಮಸ್ಥಳ ಯೋಜನೆಯಿಂದ ಹಲವು ಜನೋಪಯೋಗಿ ಕಾರ್ಯಕ್ರಮಗಳು ನಡೆಯುತ್ತಿವೆ.

ಮಕ್ಕಳನ್ನು ದೇಶದ ಆಸ್ತಿಯಾಗಿ ರೂಪಿಸುವುದೇ ಮುಖ್ಯ ಗುರಿಯಾಗಿದೆ ಎಂದು ಹೇಳಿದರು.

ತಾಲೂಕು ಯೋಜನಾಧಿಕಾರಿ ವಾಣಿ ಎಂ.ಎಂ., ಶಿಕ್ಷಕರು, ಅಧಿಕಾರಿಗಳು ಹಾಗೂ ಸಂಘದ ಸದಸ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ರೈತರ ಹಿತಕ್ಕಾಗಿ ರಸಗೊಬ್ಬರ ವಿತರಣೆ ಮೇಲೆ ವಿಶೇಷ ನಿಗಾ ಇರಿಸಲು ರಾಜ್ಯ ಮತ್ತು ಕೇಂದ್ರ ಸರ್ಕಾರ ಷರತ್ತು

# ರಸಗೊಬ್ಬರ ಖರೀದಿಸಲು ಎಫ್ಐಡಿ ಕಡ್ಡಾಯ

**■ವಿಜಯಸಾಕ್ಷಿ ಸುದ್ದಿ, ಡಂಬಳ**

ಗದಗ ಜಿಲ್ಲೆಯ ಮುಂಡರಗಿ ತಾಲೂಕು ಹಾಗೂ ಡಂಬಳ ಹೋಬಳಿಯ ಪ್ರತಿಯೊಬ್ಬ ರೈತರು ರಸಗೊಬ್ಬರ ಖರೀದಿಗೆ ಇನ್ಮುಂದೆ ರೈತರು ಕಡ್ಡಾಯವಾಗಿ ಎಫ್ಐಡಿ ಹೊಂದಿರಬೇಕು. ಅಷ್ಟೇ ಅಲ್ಲ, ತಮ್ಮ ಭೂಮಿಯನ್ನು ಸಹ ಎಫ್ಐಡಿಗೆ ಜೋಡಿಸಿರಬೇಕು. ಇದರ ಆಧಾರದಲ್ಲಿಯೇ ರಸಗೊಬ್ಬರವನ್ನು ಕೆ.ಕಿಸಾನ್ ತಂತ್ರಜ್ಞಾನದ ಮೂಲಕ ವಿತರಣೆ ಮಾಡಲಾಗುತ್ತದೆ.



ದೇಶದಲ್ಲಿ ರಸಗೊಬ್ಬರ ತಯಾರಿಕೆಗೆ ವಿದೇಶದಿಂದ ಕಚ್ಚಾ ಸಾಮಗ್ರಿ ಹೆಚ್ಚು ಆಮದು ಮಾಡಿಕೊಳ್ಳಲಾಗುತ್ತಿದೆ. ಕೊಲ್ಲಿ ಯುದ್ಧದಿಂದ ರಸಗೊಬ್ಬರ ತಯಾರಿಕೆ ಕಚ್ಚಾ ಸಾಮಗ್ರಿ ಆಮದು ಮಾಡಲಾಗುವಲ್ಲಿ ಭಾರಿ ಸಮಸ್ಯೆಯಾಗಬಹುದು ಎನ್ನುವ ಹಿನ್ನೆಲೆಯಲ್ಲಿ ಈ ಬಾರಿ ರಸಗೊಬ್ಬರ ಉತ್ಪಾದನೆಯಲ್ಲಿ ಸ್ವಲ್ಪ ಪ್ರಮಾಣದಲ್ಲಿ ರೈತರು ತಮ್ಮ ಭೂಮಿಯನ್ನೆಲ್ಲ ಕಡ್ಡಾಯವಾಗಿ ಜೋಡಿಸಬೇಕು. ಇದರ ಆಧಾರದ ಮೇಲೆ ಹಾಕಿದ ಬೆಳೆಗೆ ರಸಗೊಬ್ಬರವನ್ನು ರೈತರಿಗೆ ಕೆ.ಕಿಸಾನ್ ತಂತ್ರಜ್ಞಾನದ ಮೂಲಕ ವಿತರಣೆ ಮಾಡಲಾಗುವುದು ಎಂದು ಮುಂಡರಗಿ ತಾಲೂಕು ಸಹಾಯಕ ಕೃಷಿ ನಿರ್ದೇಶಕ ಪ್ರಾಣೇಶ್ ಹೇಳಿದರು.

**ಕಾಳಸಂತೆಗೆ ಸಂಪೂರ್ಣ ಬ್ರೇಕ್**: ರೈತರ ಹೆಸರಿನಲ್ಲಿ ರಸಗೊಬ್ಬರ ಖರೀದಿಸಿ ಕಾಳಸಂತೆಯಲ್ಲಿ



ದಂಧೆ ಮಾಡುತ್ತಿರುವುದಕ್ಕೆ ಬ್ರೇಕ್ ಹಾಕುವುದು ಮತ್ತು ರೈತರು ಸಹ ಮಿತವ್ಯಯವಾಗಿ ರಸಗೊಬ್ಬರ ಬಳಕೆ ಮಾಡುವಂತಾಗಬೇಕು ಎನ್ನುವ ಕಾರಣಕ್ಕಾಗಿ ಕೆ.ಕಿಸಾನ್ ತಂತ್ರಜ್ಞಾನದ ಮೂಲಕ ರಸಗೊಬ್ಬರ ವಿತರಣೆ ಮಾಡಲಾಗುತ್ತದೆ. ಅಂದರೆ ರೈತರ ಭೂಮಿ, ಹಾಕಿದ ಬೆಳೆಯ ಆಧಾರದಲ್ಲಿ ಬೇಕಾಗುವ ಪ್ರಮಾಣದ ರಸಗೊಬ್ಬರ ಮಾತ್ರ ಕೆ.ಕಿಸಾನ್ ತಂತ್ರಜ್ಞಾನದ ಮೂಲಕ ವಿತರಣೆ ಮಾಡಲಾಗುತ್ತದೆ.

**ಮಾರಾಟಗಾರರ ಮೇಲೆಯೂ ನಿಯಮಗಳು ಜಾರಿ:** ರಸಗೊಬ್ಬರ ಮಾರಾಟಗಾರರು ಕಡ್ಡಾಯವಾಗಿ ರಸಗೊಬ್ಬರವನ್ನು ಕೆ-ಕಿಸಾನ್ ತಂತ್ರಾಂಶದ ಮೂಲಕ ರೈತರ ಎಫ್ಐಡಿ ನಮೂದಿಸಿ ಮಾರಾಟ ಮಾಡಬೇಕು ಹಾಗೂ ತಮ್ಮ ಎಲ್ಲಾ ಓ ಫಾರಂ ನವೀಕರಣಗೊಳಿಸಿಕೊಳ್ಳಬೇಕು. ಒಂದು ವೇಳೆ ಮಾರಾಟಗಾರರು ಓ ಫಾರಂಗಳ ನೋಂದಣಿ ಇಲ್ಲದೇ ಮಾರಾಟ ಮಾಡಿದಲ್ಲಿ ಹಾಗೂ ಗರಿಷ್ಠ ಮಾರಾಟ ಬೆಲೆಗಿಂತ ಹೆಚ್ಚಿನ ಬೆಲೆಗೆ ಮಾರಾಟ ಮಾಡುವುದು ಕಂಡುಬಂದಲ್ಲಿ ಪರವಾನಗಿ ಅಮಾನತು ಅಥವಾ ರದ್ದು ಮಾಡುವ ಎಚ್ಚರಿಕೆ ನೀಡಲಾಗಿದೆ.

**ಕಟ್ಟುನಿಟ್ಟಿನ ಸೂಚನೆ:** ಪ್ರತಿ ರಾಜ್ಯಗಳಿಗೆ ಕೇಂದ್ರ ಸರ್ಕಾರ ಕೊಡುವ ರಸಗೊಬ್ಬರ ವಿತರಣೆಯನ್ನಾಧರಿಸಿದೆ. ಅಂದರೆ ರೈತರಿಗೆ ವಿತರಣೆಯಾಗಿರುವ ದೃಢೀಕರಣವನ್ನಾಧರಿಸಿ ರಾಜ್ಯಕ್ಕೆ ಹಂತಹಂತವಾಗಿ ರಸಗೊಬ್ಬರ ವಿತರಣೆ ಮಾಡಲಾಗುತ್ತದೆ. ಹೀಗಾಗಿ ಎಲ್ಲಾ ರಾಜ್ಯ ಸರ್ಕಾರಗಳಲ್ಲಿ ಎಫ್ಐಡಿ ಕಡ್ಡಾಯ ಮಾಡಿ ಆದೇಶ ನೀಡಿದೆ.

"ರಾಜ್ಯ ಮತ್ತು ಕೇಂದ್ರ ಸರಕಾರದ ರೈತರಿಗೆ ಸಂಬಂಧಿಸಿದ ಸೌಲಭ್ಯಗಳನ್ನು ಪಡೆಯಲು ಮತ್ತು ರೈತರು ರಸಗೊಬ್ಬರ ಪಡೆಯಲು ಎಫ್ಐಡಿ ಕಡ್ಡಾಯವಾಗಿ ಹೊಂದಿರಬೇಕಾಗಿದೆ. ಈಗಾಗಲೇ ಎಫ್ಐಡಿ ಮಾಡಿಸಿಕೊಂಡಿದ್ದರೆ ಸರಿ. ಕೆಲ ರೈತರು ಮಾಡಿಸಿಕೊಳ್ಳದಿದ್ದರೆ ಕಡ್ಡಾಯವಾಗಿ ಮಾಡಿಸಿಕೊಳ್ಳಬೇಕು. ತಮ್ಮ ಎಲ್ಲಾ ಭೂಮಿಯ ಪಹಣಿಯನ್ನು ಸಹ ಎಫ್ಐಡಿಗೆ ಜೋಡಿಸಿಕೊಳ್ಳುವುದು ಕಡ್ಡಾಯವಾಗಿದೆ"

**–ಪ್ರಾಣೇಶ್**, ಮುಂಡರಗಿ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರು.

ರೈತರು ಈಗಾಗಲೇ ಎಫ್ಐಡಿ ಹೊಂದಿದ್ದಲ್ಲಿ ಅಥವಾ ಹೊಂದಿರದೆ ಇದ್ದಲ್ಲಿ ತಮ್ಮ ಎಲ್ಲಾ ಪಹಣಿ ಹಾಗೂ ಆಧಾರ್ ಕಾರ್ಡ್ ತೆಗೆದುಕೊಂಡು ಸಮೀಪದ ರೈತ ಸಂಪರ್ಕ ಕೇಂದ್ರ, ಸಾಮಾನ್ಯ ಸೇವಾ ಕೇಂದ್ರ ಮತ್ತು ಗ್ರಾಮ ಒನ್ ಕೇಂದ್ರಗಳಿಗೆ ಭೇಟಿ ನೀಡಬೇಕು. ಎಫ್ಐಡಿ ಹೊಂದಿದ್ದಲ್ಲಿ ನಿಮ್ಮ ಎಲ್ಲಾ ಸರ್ವೆ ನಂಬರ್ ಎಫ್ಐಡಿಗೆ ಲಿಂಕ್ ಮಾಡಿಸಿಕೊಳ್ಳಲು ಹಾಗೂ ಎಫ್ಐಡಿ ಹೊಂದಿರದೆ ಇದ್ದಲ್ಲಿ ಹೊಸದಾಗಿ ಎಫ್ಐಡಿ ಸೃಜಿಸಿಕೊಳ್ಳಬೇಕು ಎನ್ನಲಾಗುತ್ತದೆ.

### ಪ್ರತ್ಯೇಕ ಸಾಫ್ಟ್‌ವೇರ್

ಇದಕ್ಕಾಗಿ ಪ್ರತ್ಯೇಕ ಸಾಫ್ಟ್‌ವೇರ್ ಸಹ ಮಾಡಲಾಗುತ್ತಿದ್ದು, ಪ್ರತಿಯೊಂದರ ಮೇಲೆಯೂ ನಿಗಾ ಇರಿಸಲಾಗುತ್ತದೆ. ವಿತರಣೆಯಾದ ರಸಗೊಬ್ಬರ ಯಾರಿಗೆ ವಿತರಣೆಯಾಗಿದೆ ಮತ್ತು ಬಳಕೆಯಾಗಿದೆ ಎನ್ನುವುದನ್ನು ಪರಾಮರ್ಶೆ ಮಾಡಲಾಗುತ್ತದೆ ಎನ್ನುವುದು ಗಮನಾರ್ಹ ಸಂಗತಿ.

ರೈತರು ತಮ್ಮ ಎಲ್ಲಾ ಪಹಣಿ ಹಾಗೂ ಆಧಾರ್ ಕಾರ್ಡ್ ತೆಗೆದುಕೊಂಡು ಸಮೀಪದ ರೈತ ಸಂಪರ್ಕ ಕೇಂದ್ರ, ಸಾಮಾನ್ಯ ಸೇವಾ ಕೇಂದ್ರ ಮತ್ತು ಗ್ರಾಮ ಒನ್ ಕೇಂದ್ರಗಳಿಗೆ ಭೇಟಿ ನೀಡಬೇಕು.

---

ಜಿಲ್ಲಾಡಳಿತ ಭವನದಲ್ಲಿ ಡಾ. ಬಾಬು ಜಗಜೀವನ ರಾಂ ಜಯಂತಿ ಆಚರಣೆಯಲ್ಲಿ ಡಾ. ದುರಗೇಶ್ ಕೆ.ಆರ್ ಪುಷ್ಪನಮನ

## ಹಸಿರು ಕ್ರಾಂತಿ ಹರಿಕಾರರ ಸಾಧನೆಗೆ ಸ್ಮರಣೆ ಸಲ್ಲಿಕೆ



**■ವಿಜಯಸಾಕ್ಷಿ ಸುದ್ದಿ, ಗದಗ**

ದೇಶದ ಹಸಿರು ಕ್ರಾಂತಿ ಹರಿಕಾರ ಹಾಗೂ ಮಾಜಿ ಉಪಪ್ರಧಾನಿ ಡಾ. ಬಾಬು ಜಗಜೀವನ ರಾಂ ಅವರ 119ನೇ ಜಯಂತಿಯನ್ನು ಭಾನುವಾರ ಜಿಲ್ಲಾಡಳಿತ ಭವನದಲ್ಲಿ ಸರಳವಾಗಿ ಆಚರಿಸಲಾಯಿತು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ನಗರಸಭೆ ಗದಗ-ಬೆಟಗೇರಿ ಹಾಗೂ ವಿವಿಧ ದಲಿತಪರ ಸಂಘಟನೆಗಳ ಸಹಯೋಗದಲ್ಲಿ ನಡೆದ ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ಅವರು ಬಾಬುಜಿಯವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು.

ನಂತರ ಮಾತನಾಡಿದ ಅವರು, ಡಾ. ಬಾಬು ಜಗಜೀವನ ರಾಂ ಅವರು ಸಾಮಾಜಿಕ ಸುಧಾರಣೆ, ಮಹಿಳಾ ಶಿಕ್ಷಣ, ಅಲ್ಪಸಂಖ್ಯಾತರ ಹಕ್ಕುಗಳು ಹಾಗೂ ಪರಿಸರ ಸಂರಕ್ಷಣೆಯಲ್ಲಿ ಮಹತ್ವದ ಕೊಡುಗೆ ನೀಡಿದ್ದಾರೆ ಎಂದು ಹೇಳಿದರು.

ಹಸಿರು ಕ್ರಾಂತಿ ಸೇರಿದಂತೆ ಆಹಾರ ಭದ್ರತೆ, ಸಮಾನತೆ ಮತ್ತು ನ್ಯಾಯಕ್ಕಾಗಿ ಅವರು ನಡೆಸಿದ ಹೋರಾಟಗಳು ದೇಶದ ಅಭಿವೃದ್ಧಿಗೆ ದಾರಿದೀಪವಾಗಿವೆ. ಅವರ ಆದರ್ಶಗಳನ್ನು ನಮ್ಮ ದೈನಂದಿನ ಜೀವನದಲ್ಲಿ ಅಳವಡಿಸಿಕೊಳ್ಳುವುದು ಅಗತ್ಯವೆಂದು ತಿಳಿಸಿದರು.

ಇದೇ ವೇಳೆ ಎಪ್ರಿಲ್ 14ರಂದು ಡಾ. ಬಾಬು ಜಗಜೀವನ ರಾಂ ಹಾಗೂ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಜಯಂತಿಯನ್ನು ಅದ್ದೂರಿಯಾಗಿ ಆಚರಿಸಲಾಗುವುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು, ಸಮಾಜದ ಮುಖಂಡರು, ದಲಿತ ಚಿಂತಕರು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

"ಬಾಬು ಜಗಜೀವನ ರಾಂ ಅವರ ಆದರ್ಶಗಳು ಸಮಾಜದ ಪ್ರಗತಿಗೆ ದಾರಿದೀಪವಾಗಿವೆ."

**– ಡಾ. ದುರಗೇಶ್ ಕೆ.ಆರ್**, ಅಪರ ಜಿಲ್ಲಾಧಿಕಾರಿ.

---

ತಾಲೂಕು ಸೌಧದಲ್ಲಿ ಡಾ. ಬಾಬು ಜಗಜೀವನರಾಂ ಜಯಂತಿ ಆಚರಣೆ – ಕೃಷಿ ಕ್ರಾಂತಿಗೆ ಮಹತ್ವದ ಕೊಡುಗೆ ಸ್ಮರಣೆ

## ಹಸಿವಿಲ್ಲದ ಭಾರತದ ಕನಸು ಕಂಡ ಬಾಬೂಜಿ



**■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಪಟ್ಟಣದ ತಾಲೂಕು ಸೌಧದಲ್ಲಿ ತಾಲೂಕು ಆಡಳಿತ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಹಯೋಗದಲ್ಲಿ ಮಹಾನ್ ನಾಯಕ ಡಾ. ಬಾಬು ಜಗಜೀವನರಾಂ (ಬಾಬೂಜಿ) ಅವರ ಜಯಂತಿಯನ್ನು ಭಕ್ತಿಭಾವದಿಂದ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ತಾಲೂಕು ಅಂಬೇಡ್ಕರ್ ಸಂಘದ ಅಧ್ಯಕ್ಷರಾದ ಗದ್ದಿಕೇರಿ ಹೆಚ್. ದೊಡ್ಡಬಸಪ್ಪ ಅವರು, ಬಾಬೂಜಿಯವರು ತಮ್ಮ ಅಧಿಕಾರಾವಧಿಯುದ್ದಕ್ಕೂ ಸಮಾಜದಲ್ಲಿನ ಅಸ್ಪೃಶ್ಯತೆ, ಬಡತನ, ನಿರುದ್ಯೋಗ ಹಾಗೂ ಆಹಾರದ ಕೊರತೆ ಮುಂತಾದ ಗಂಭೀರ ಸಮಸ್ಯೆಗಳ ನಿವಾರಣೆಗೆ ಶ್ರಮಿಸಿದರು ಎಂದು ಹೇಳಿದರು. ಕೃಷಿಯಲ್ಲಿ ಇಳುವರಿ ಹೆಚ್ಚಿಸಲು ಬಿತ್ತನೆ ವಿಧಾನ, ಉತ್ತಮ ಬೀಜ, ಗೊಬ್ಬರ, ಆಧುನಿಕ ಕೃಷಿ ಸಾಧನಗಳ ಬಳಕೆ ಹಾಗೂ ನೀರಾವರಿ ವ್ಯವಸ್ಥೆ ಪರಿಚಯಿಸುವ ಮೂಲಕ ಕೃಷಿ ಕ್ಷೇತ್ರದಲ್ಲಿ ಮಹತ್ವದ ಬದಲಾವಣೆ ತಂದವರು ಎಂದು ಅಭಿಪ್ರಾಯಪಟ್ಟರು.

ತಾಲೂಕು ದಂಡಾಧಿಕಾರಿಗಳಾದ ಆರ್. ಕವಿತಾ ಅವರು ಮಾತನಾಡಿ, ಬಾಬೂಜಿಯವರು ಹಲವು ಖಾತೆಗಳನ್ನು ಯಶಸ್ವಿಯಾಗಿ ನಿರ್ವಹಿಸಿದ ದೈತ್ಯ ಪ್ರತಿಭೆಯಾಗಿದ್ದರು. ಕೃಷಿ ಖಾತೆಯಲ್ಲಿ ಉತ್ತಮ ಯೋಜನೆಗಳನ್ನು ಜಾರಿಗೆ ತಂದು, ಜೊತೆಗೆ ರಕ್ಷಣಾ ಖಾತೆಯನ್ನು ಕೂಡ ಸಮರ್ಥವಾಗಿ ನಿರ್ವಹಿಸಿದ ಅವರ ಸಾಧನೆಗಳು ಇಂದಿಗೂ ಪ್ರಸ್ತುತವಾಗಿವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆ ನಿರ್ದೇಶಕರಾದ ಜಗದೀಶ್ ದಿಡಗೂರು, ಬಾಬು ಜಗಜೀವನರಾಂ ಸಂಘದ ತಾಲೂಕು ಅಧ್ಯಕ್ಷರಾದ ಹೆಚ್. ಪ್ರಭಾಕರ್, ಶೋಭಾ ಸುಧಾಕರ್ಣ, ಚೆಲುವಾದಿ ಮಹಾಸಭಾ ಅಧ್ಯಕ್ಷ ಕಾಳಿ ಬಸವರಾಜ್, ಅಂಬೇಡ್ಕರ್ ಸ್ವಾಭಿಮಾನಿ ಸಂಘದ ಜಿಲ್ಲಾಧ್ಯಕ್ಷ ಮಂಜುನಾಥ್, ಅಲೆಮಾರಿ ಸಂಘದ ತಾಲೂಕು ಅಧ್ಯಕ್ಷ ಮಲ್ಲೇಶಪ್ಪ, ಡಿಎಸ್ಎಸ್ ಜಿಲ್ಲಾ ಸಂಘಟನಾ ಸಂಚಾಲಕ ಕೋಗಳಿ ಉಮೇಶ್ ಸೇರಿದಂತೆ ವಿವಿಧ ಸಂಘಟನೆಗಳ ಮುಖಂಡರು, ನಿಲಯಗಳ ಪಾಲಕರು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

"ಹಸಿವಿಲ್ಲದ ಭಾರತ ನಿರ್ಮಾಣವೇ ಬಾಬೂಜಿಯವರ ಮಹತ್ವಾಕಾಂಕ್ಷಿ ಕನಸು, ಕೃಷಿ ಕ್ರಾಂತಿಯ ಮೂಲಕ ಅದನ್ನು ಸಾಕಾರಗೊಳಿಸಲು ಅವರು ಶ್ರಮಿಸಿದರು" ಎಂದು ದೊಡ್ಡಬಸಪ್ಪ ಹೇಳಿದರು.

---

ಮಧ್ಯಾಹ್ನ 12ರಿಂದ 3ರವರೆಗೆ ಬಿಸಿಲು ತಪ್ಪಿಸಲು ಡಿಸಿ ಕರೆ – ನಿರ್ಜಲೀಕರಣ, ಶಾಖಾಘಾತ ತಡೆಗೆ ಸಲಹೆಗಳು

## ಬಿಸಿಗಾಳಿಯಿಂದ ಆರೋಗ್ಯ ರಕ್ಷಣೆ ಅಗತ್ಯ ಜಿಲ್ಲಾಧಿಕಾರಿ ಸೂಚನೆ

**■ವಿಜಯಸಾಕ್ಷಿ ಸುದ್ದಿ, ಗದಗ**

2026ರ ಬೇಸಿಗೆ ಅವಧಿಯಲ್ಲಿ ರಾಜ್ಯದ ಬಹುತೇಕ ಭಾಗಗಳಲ್ಲಿ ಗರಿಷ್ಠ ತಾಪಮಾನ ಸಾಮಾನ್ಯಕ್ಕಿಂತ ಹೆಚ್ಚಾಗುವ ಸಾಧ್ಯತೆಯಿದ್ದು, 3ರಿಂದ 6 ದಿನಗಳವರೆಗೆ ಬಿಸಿಗಾಳಿಯ ಪ್ರಭಾವ ಕಂಡು ಬರುವ ಸಾಧ್ಯತೆ ಇದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದ್ದಾರೆ.

ತೀವ್ರ ಬಿಸಿಲು ಸಾರ್ವಜನಿಕರ ಆರೋಗ್ಯದ ಮೇಲೆ, ವಿಶೇಷವಾಗಿ ಮಕ್ಕಳು, ವೃದ್ಧರು ಹಾಗೂ ಅನಾರೋಗ್ಯ ಪೀಡಿತರ ಮೇಲೆ ಗಂಭೀರ ಪರಿಣಾಮ ಬೀರುವ ಸಾಧ್ಯತೆ ಇರುವುದರಿಂದ ಮುನ್ನೆಚ್ಚರಿಕೆ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸೂಚಿಸಿದ್ದಾರೆ.

ಬಿಸಿಲಿನಿಂದ ಉಂಟಾಗುವ ನಿರ್ಜಲೀಕರಣ, ಶಾಖದ ಬಳಲಿಕೆ ಹಾಗೂ ಶಾಖಾಘಾತವನ್ನು ತಡೆಗಟ್ಟಲು ದಿನದ ಮಧ್ಯಾಹ್ನ 12ರಿಂದ 3ರವರೆಗೆ ಹೊರಗಡೆ ಹೋಗುವುದನ್ನು ತಪ್ಪಿಸಬೇಕು. ಸಾಕಷ್ಟು ನೀರು ಕುಡಿಯುವುದು, ಹಗುರ ಬಣ್ಣದ ಹತ್ತಿ ಬಟ್ಟೆಗಳನ್ನು ಧರಿಸುವುದು ಹಾಗೂ ಹೊರಗೆ ಹೋಗುವಾಗ ಛತ್ರಿ, ಟೋಪಿ, ಕನ್ನಡಕ ಬಳಸುವುದು ಅಗತ್ಯವೆಂದು ತಿಳಿಸಿದ್ದಾರೆ. ಪ್ರಯಾಣದ ವೇಳೆ ನೀರು ಕಡ್ಡಾಯವಾಗಿ ಜೊತೆಗೆ ಇರಿಸಿಕೊಳ್ಳಬೇಕು. ಅಲ್ಕೋಹಾಲ್, ಚಹಾ, ಕಾಫಿ ಹಾಗೂ ಕಾರ್ಬೋನೇಟೆಡ್ ಪಾನೀಯಗಳನ್ನು ತಪ್ಪಿಸಿ, ನಿಂಬೆ ನೀರು, ಮಜ್ಜಿಗೆ, ಓಆರ್ಎಸ್ ಮುಂತಾದ ಪಾನೀಯಗಳನ್ನು ಸೇವಿಸಬೇಕು ಎಂದು ಸಲಹೆ ನೀಡಿದ್ದಾರೆ.

ಕಲ್ಲಂಗಡಿ, ಕರಬೂಜ, ಕಿತ್ತಳೆ, ದ್ರಾಕ್ಷಿ, ಸೌತೆಕಾಯಿ ಸೇರಿದಂತೆ ನೀರಿನ ಅಂಶ ಅಧಿಕವಾಗಿರುವ ಹಣ್ಣು ಹಾಗೂ ತರಕಾರಿಗಳನ್ನು ಸೇವಿಸುವುದು ಉತ್ತಮ ಎಂದು ತಿಳಿಸಿದ್ದಾರೆ.

ಬಿಸಿಲಿನ ಪರಿಣಾಮದಿಂದ ಮೂರ್ಛೆ, ದೌರ್ಬಲ್ಯ, ತಲೆನೋವು, ವಾಂತಿ, ತಲೆತಿರುಗುವಿಕೆ ಕಂಡುಬಂದರೆ ತಕ್ಷಣ ವೈದ್ಯರನ್ನು ಸಂಪರ್ಕಿಸುವಂತೆ ಜಿಲ್ಲಾಧಿಕಾರಿ ತಿಳಿಸಿದ್ದಾರೆ.

"ಬಿಸಿಗಾಳಿಯಿಂದ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀಳಬಹುದು, ಮುನ್ನೆಚ್ಚರಿಕೆ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ."

**– ಸಿ.ಎನ್. ಶ್ರೀಧರ್**, ಜಿಲ್ಲಾಧಿಕಾರಿ.

---

ಸಂಸ್ಥಾಪನಾ ದಿನದ ಅಂಗವಾಗಿ ಧ್ವಜಾರೋಹಣ- ಮಹಾನ್ ನಾಯಕರ ತ್ಯಾಗ ಸ್ಮರಣೆ

## ಕಾರ್ಯಕರ್ತರ ಶ್ರಮವೇ ಬಿಜೆಪಿ ಬಲ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ದೇಶದ ಅಭಿವೃದ್ಧಿಯ ಮಹದೋದ್ದೇಶ ಹೊಂದಿರುವ ಪಕ್ಷದ ಕಾರ್ಯಕರ್ತರ ಶ್ರಮ, ತ್ಯಾಗ ಮತ್ತು ಸಮರ್ಪಣಾ ಮನೋಭಾವದಿಂದಲೇ ಭಾರತೀಯ ಜನತಾ ಪಕ್ಷ ಜಗತ್ತಿನಲ್ಲಿಯೇ ಅತಿದೊಡ್ಡ ಕಾರ್ಯಕರ್ತರನ್ನು ಹೊಂದಿರುವ ಪಕ್ಷವಾಗಿ ಬೆಳೆದಿದೆ ಎಂದು ಶಿರಹಟ್ಟಿ ಮಂಡಳ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ ಹೇಳಿದರು.

ಅವರು ಸೋಮವಾರ ಪಟ್ಟಣದಲ್ಲಿ ಬಿಜೆಪಿ ಸಂಸ್ಥಾಪನಾ ದಿನದ ಅಂಗವಾಗಿ ವಿವಿಧ ಕಡೆಗಳಲ್ಲಿ ಪಕ್ಷದ ಧ್ವಜಾರೋಹಣ ಕಾರ್ಯಕ್ರಮದಲ್ಲಿ ಮಾತನಾಡಿ, ಪಕ್ಷಕ್ಕೆ ಕಾರ್ಯಕರ್ತರೇ ಜೀವಾಳವಾಗಿದ್ದು, ಅನೇಕ ನಾಯಕರ ರಾಷ್ಟ್ರಹಿತದ ಚಿಂತನೆಯಿಂದ ನಿರ್ಮಿತವಾದ ಬಿಜೆಪಿ ಇಂದು ಹೆಮ್ಮರವಾಗಿ ಬೆಳೆದಿದೆ ಎಂದು ಹೇಳಿದರು.

ಇಂದು ಭಾರತವನ್ನು ವಿಶ್ವಗುರುವಿನ ಸ್ಥಾನಕ್ಕೆ ತಲುಪಿಸುವಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಪಾತ್ರ ಮಹತ್ವದ್ದಾಗಿದೆ ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ನಗರ ಘಟಕದ ಅಧ್ಯಕ್ಷ ವಿಜಯ ಕುಂಬಾರ, ಪ್ರಧಾನ ಕಾರ್ಯದರ್ಶಿ ಪ್ರವೀಣ ಬೋಮಲೆ, ಎಂ.ಎಸ್. ದೊಡ್ಡಗೌಡ್ರ, ಗಂಗಾಧರ ಮೆಣಸಿನಕಾಯಿ, ಅನಿಲ್ ಮುಳಗುಂದ, ಸಂತೋಷ ಜಾವೂರ, ಬಸವರಾಜ ಚಕ್ರಸಾಲಿ, ನಿಂಬಣ್ಣ ಮಡಿವಾಳರ, ಥಾವರೆಪ್ಪ ಲಮಾಣಿ, ಬೀಮಣ್ಣ ಯಂಗಾಡಿ, ರಮೇಶ್ ಹಾಳದೋಟದ, ಪ್ರಕಾಶ ಮಾದನೂರ ಸೇರಿದಂತೆ ವಿವಿಧ ಮೋರ್ಚಾದ ಪದಾಧಿಕಾರಿಗಳು, ಮುಖಂಡರು, ಕಾರ್ಯಕರ್ತರು ಮತ್ತು ಅಭಿಮಾನಿಗಳು ಉಪಸ್ಥಿತರಿದ್ದರು.

ಪಂಡಿತ್ ದೀನ ದಯಾಳ್ ಉಪಾಧ್ಯಾಯ, ಶ್ಯಾಮ ಪ್ರಸಾದ ಮುಖರ್ಜಿ, ಅಟಲ್ ಬಿಹಾರಿ ವಾಜಪೇಯಿ ಹಾಗೂ ಲಾಲ್ ಕೃಷ್ಣ ಅಡ್ವಾಣಿ ಅವರ ತ್ಯಾಗ ಮತ್ತು ಸಂಘಟನಾ ಶಕ್ತಿಯನ್ನು ಸ್ಮರಿಸಿದ ಅವರು, ವಿಶ್ವದ ಅತಿದೊಡ್ಡ ರಾಜಕೀಯ ಪಕ್ಷವಾಗಿ ಬಿಜೆಪಿ ಬೆಳೆದಿರುವುದು ಹೆಮ್ಮೆಯ ವಿಷಯ ಎಂದು ಸುನೀಲ್ ಮಹಾಂತಶೆಟ್ಟರ ತಿಳಿಸಿದರು.

---

## ರಸಗೊಬ್ಬರ ಖರೀದಿಗೆ ರೈತರಿಗೆ FID ಕಡ್ಡಾಯ

▶▶ ಮೊದಲನೇ ಪುಟದಿಂದ

ಹೊಸದಾಗಿ ನೋಂದಣಿ ಮಾಡಿಸಿಕೊಳ್ಳಬೇಕು.

ಇನ್ನು ರಸಗೊಬ್ಬರ ಮಾರಾಟಗಾರರು ಕಡ್ಡಾಯವಾಗಿ ಕೆ-ಕಿಸಾನ್ ತಂತ್ರಾಂಶದ ಮೂಲಕವೇ ಮಾರಾಟ ನಡೆಸಬೇಕು. ನಿಯಮ ಉಲ್ಲಂಘನೆ, ಅಕ್ರಮ ದಾಸ್ತಾನು, ಕಳ್ಳಸಾಗಣೆ, ಕೃತಕ ಅಭಾವ ಸೃಷ್ಟಿ ಅಥವಾ ಹೆಚ್ಚು ದರಕ್ಕೆ ಮಾರಾಟ ಮಾಡಿದರೆ ರಸಗೊಬ್ಬರ ನಿಯಂತ್ರಣ ಕಾಯ್ದೆ (FCO) 1985 ಅಡಿಯಲ್ಲಿ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಲಾಗಿದೆ.

---

## ಸರಕಾರಿ ಶಾಲೆಗೆ ಹೊಸ ಕೊಠಡಿ ನಿರ್ಮಾಣಕ್ಕೆ ಚಾಲನೆ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಶ್ರೀ ವೀರಗಂಗಾಧರ ಸರಕಾರಿ ಪ್ರೌಢಶಾಲೆಯಲ್ಲಿ ಹೆಚ್ಚುವರಿ ಕೊಠಡಿ ನಿರ್ಮಾಣ ಕಾಮಗಾರಿಗೆ ಶಾಸಕ ಡಾ. ಚಂದ್ರು ಲಮಾಣಿ ಭೂಮಿ ಪೂಜೆ ನೆರವೇರಿಸಿದರು.

ರಾಜ್ಯ ವಲಯ ವಿಶೇಷ ಅಭಿವೃದ್ಧಿ ಯೋಜನೆ ಅಡಿಯಲ್ಲಿ ಸುಮಾರು 11.88 ಲಕ್ಷ ವೆಚ್ಚದಲ್ಲಿ ಈ ಕಾಮಗಾರಿಯನ್ನು ಕೈಗೊಳ್ಳಲಾಗುತ್ತಿದೆ.

ಈ ವೇಳೆ ಮಾತನಾಡಿದ ಶಾಸಕ ಡಾ. ಚಂದ್ರು ಲಮಾಣಿ, ಸರಕಾರಿ ಶಾಲೆಗಳ ಮೂಲಸೌಕರ್ಯ ಅಭಿವೃದ್ಧಿಗೆ ಸರ್ಕಾರ ಹೆಚ್ಚಿನ ಆದ್ಯತೆ ನೀಡುತ್ತಿದ್ದು, ಪ್ರಾಥಮಿಕದಿಂದ ಕಾಲೇಜು ಮಟ್ಟದವರೆಗೆ ಅಗತ್ಯ ಅನುದಾನ ಒದಗಿಸಲಾಗುತ್ತಿದೆ ಎಂದರು.

ಶಾಲೆಯಲ್ಲಿ ಹೆಚ್ಚುವರಿ ಕೊಠಡಿ ನಿರ್ಮಾಣದ ಜೊತೆಗೆ ಕಂಪೌಂಡ್ ಗೋಡೆ ಸೇರಿದಂತೆ ಇತರ ಬೇಡಿಕೆಗಳನ್ನು ಈಡೇರಿಸಲು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಅವರು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ರಾಜ್ಯ ಪ್ರಶಸ್ತಿ ಪಡೆದ ಕ್ಷೇತ್ರ ಶಿಕ್ಷಣಾಧಿಕಾರಿ ಎಚ್. ನಾಣಕೀ ನಾಯಕ್ ಅವರನ್ನು ಶಿಕ್ಷಕರ ವತಿಯಿಂದ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ವಿವಿಧ ಗಣ್ಯರು, ಶಿಕ್ಷಕರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

---

## ಬಿಜೆಪಿ 47ನೇ ಸಂಸ್ಥಾಪನಾ ದಿನಾಚರಣೆ: ಕಾರ್ಯಕರ್ತರಿಗೆ ಒಗ್ಗಟ್ಟಿನ ಸಂದೇಶ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಭಾರತೀಯ ಜನತಾ ಪಕ್ಷದ 47ನೇ ಸಂಸ್ಥಾಪನಾ ದಿನಾಚರಣೆಯನ್ನು ತಾಲೂಕಿನ ವಿವಿಧ ಗ್ರಾಮಗಳಲ್ಲಿ ಸಂಭ್ರಮದಿಂದ ಆಚರಿಸಲಾಯಿತು. ಬಸ್ತಿಬಣ ಸೇರಿದಂತೆ ಹಲವೆಡೆ ಪಕ್ಷದ ಧ್ವಜಾರೋಹಣ ನೆರವೇರಿಸಿ, ಹಿರಿಯರು ಹಾಗೂ ಮುಖಂಡರು ಭಾಗವಹಿಸಿ ಕಾರ್ಯಕರ್ತರಿಗೆ ಒಗ್ಗಟ್ಟಿನ ಸಂದೇಶ ನೀಡಿದರು.


ಪಕ್ಷದ ಹಿರಿಯ ಚಂಬಣ್ಣ ಬಾಳಿಕಾಯಿ ಮಾತನಾಡಿ, ಬಿಜೆಪಿ ಸುದೀರ್ಘ ಪಯಣವನ್ನು ಸ್ಮರಿಸಿ, ಹಿರಿಯರ ಸಂಘಟನೆಯಿಂದಲೇ ಪಕ್ಷ ಇಂದು ಬಲಿಷ್ಠವಾಗಿ ಬೆಳೆಯಲು ಸಾಧ್ಯವಾಗಿದೆ ಎಂದು ಹೇಳಿದರು.

ಮುಖಂಡರಾದ ಗೀರಿಶ ಅಗಡಿ ಮಾತನಾಡಿ, ಪಕ್ಷದೊಳಗಿನ ಭಿನ್ನಾಭಿಪ್ರಾಯಗಳನ್ನು ಬದಿಗೊತ್ತಿ ಕಾರ್ಯಕರ್ತರು ಒಗ್ಗೂಡಿ ಕೆಲಸ ಮಾಡಿದರೆ ಮುಂದಿನ ದಿನಗಳಲ್ಲಿ ಬಿಜೆಪಿ ಬಹುಮತದಿಂದ ಗೆಲುವು ಸಾಧಿಸಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ಮಂಜುನಾಥ ಮಾಗಡಿ ಮತ್ತು ರವಿಕಾಂತ ಅಂಗಡಿ ಅವರು ಮಾತನಾಡಿ, ಅನೇಕ ಕಾರ್ಯಕರ್ತರ ತ್ಯಾಗ ಮತ್ತು ಪರಿಶ್ರಮದಿಂದಲೇ ಬಿಜೆಪಿ ಬೆಳೆದಿದ್ದು, ಮತ್ತೆ ರಾಜ್ಯದಲ್ಲಿ ಅಧಿಕಾರಕ್ಕೆ ತರಲು ಎಲ್ಲರೂ ಶ್ರಮಿಸಬೇಕು ಎಂದು ಕರೆ ನೀಡಿದರು.

ವೀರಯ್ಯ ಕಳ್ಳಿಮಠ ಹಾಗೂ ನಾಗರಾಜ ಚಿಂಚಲಿ ಅವರು ಮಾತನಾಡಿ, ಪಕ್ಷ ನಿರಂತರವಾಗಿ ಬೆಳೆಯುತ್ತಿದ್ದರೂ ಹಳೆಯ ಕಾರ್ಯಕರ್ತರನ್ನು ಕಡೆಗಣಿಸುವುದು ಬೇಸರದ ಸಂಗತಿ ಎಂದು ಹೇಳಿ, ಎಲ್ಲರೂ ಒಗ್ಗೂಡಿ ಸಂಘಟನೆಯನ್ನು ಬಲಪಡಿಸಬೇಕು ಎಂದು ಸೂಚಿಸಿದರು.

ಈ ಸಂದರ್ಭದಲ್ಲಿ ಅಶೋಕ, ಗುರಪ್ಪ ಮುಳಗುಂದ, ರಾಘವೇಂದ್ರ ಪೂಜಾರ, ಪ್ರಕಾಶ ಮೇವುಂಡಿ, ಶಿವಣ್ಣ ಬನ್ನಿಮಟ್ಟಿ, ವಿನಯ ಪಾಟೀಲ, ಪಾರಮ್ಮ ಧರಣಿ, ನಿರ್ಮಲಾ ಧರಣಿ, ರಾಜು ಬೆಲ್ಲದ, ಪವನ್ ಬಂಕಾಪೂರ, ಚಂದ್ರು ಮಾಗಡಿ, ಮಲ್ಲಿಕಾರ್ಜುನ, ರವಿ, ಮಹಾಂತೇಶ ಹರಪನಹಳ್ಳಿ, ವಾಲೀಶಟ್ಟರ್, ಚಂದ್ರು ಧರಣಿ, ಶಂಕ್ರಣ್ಣ ಬ್ಯಾಡಗಿ, ಮಂಜುನಾಥ ಮಂಟಗಣಿ, ಗಂಗಾಧರ ಗಡೇಣ್ಣವರ್ ಸೇರಿದಂತೆ ಅನೇಕರು ಹಾಜರಿದ್ದರು.



VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka